ಸಂಪುಟ : 11 ಸಂಚಿಕೆ: 13 ಪುಟ : 4+2 ಬೆಲೆ: 3.00 ರವಿವಾರ ಫೆಬ್ರವರಿ 08 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 13 Pages : 4+2 Price : 3.00 Sunday February 08 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ವಿದೇಶಿ ಮಹಿಳೆ ಸೇರಿ ಇಬ್ಬರ ಅತ್ಯಾಚಾರ, ಓರ್ವನ ಕೊಲೆ ಪ್ರಕರಣ : ಮೂವರು

■ ವಿಜಯಸಾಕ್ಷಿ ಸುದ್ದಿ, ಗಂಗಾವತಿ

ಕೊಪ್ಪಳದ ಗಂಗಾವತಿ ತಾಲೂಕಿನ ಸಾಣಾಪುರ ಕೆರೆ ಬಳಿ ಸ್ಥಳೀಯ ಹೋಮ್ ಸ್ಟೇ ಮಾಲಕಿ ಮತ್ತು ಇಸ್ರೇಲಿ ಯುವತಿ ಮೇಲೆ ಅತ್ಯಾಚಾರವೆಸಗಿ, ಅವರ ಜೊತೆಗಿದ್ದ ಯುವಕನನ್ನು ಕೊಲೆಗೈದ ಪ್ರಕರಣದ ಮೂವರು ಆರೋಪಿಗಳನ್ನು ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸಷೆನ್ಸ್ ನ್ಯಾಯಾಲಯವು ಶುಕ್ರವಾರ (ಫೆ.6) ದೋಷಿಗಳು ಎಂದು ಘೋಷಿಸಿದ್ದು, ಶಿಕ್ಷೆ ಪ್ರಮಾಣ ಫೆ.16ರಂದು ಪ್ರಕಟಿಸುವುದಾಗಿ ತಿಳಿಸಿದೆ.

ಭಾವಪೂರ್ಣ ಶ್ರದ್ಧಾಂಜಲಿ



ಶ್ರೀ ಸುಭಾಸಸಿಂಗ್ ತೋ ರಜಪೂತ

ಸಾ॥ ಬೆಟಗೇರಿ

ಇವರು ತಮ್ಮ 48ನೇ ವಯಸ್ಸಿನಲ್ಲಿ ದಿನಾಂಕ 07-02-2026 ರ ಶನಿವಾರ ಮದ್ಯಾಹ್ನ 4:10ಕ್ಕೆ ಹೃದಯಾಘಾತದಿಂದ ನಿಧನ ಹೊಂದಿದರು. ಮೃತರ ಅಂತ್ಯಕ್ರಿಯೆ ದಿನಾಂಕ : 08-02-2026 ರಂದು ರವಿವಾರ ಮುಂಜಾನೆ 10 ಘಂಟೆಗೆ ಸ್ವ-ಗೃಹ ಶರಣ ಬಸವೇಶ್ವರ ನಗರ, ಬೆಟಗೇರಿ ದಿಂದ ಹೊರಡುವುದು.

ದುಃಖತಪ್ತರು

ತಾಯಿ, ಅಣ್ಣಂದಿರು, ಪತ್ನಿ, ಮಕ್ಕಳು ಹಾಗೂ ಅಪಾರ - ಬಂಧುಬಳಗ

ಮೊ ನಂ : 92428 73707

### ವಿವಿಧ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಕೆಲಸಗಳು ಉಳಿಯುತ್ತವೆ, ಟೀಕೆಗಳು ಸಾಯುತ್ತವೆ



■ ವಿಜಯಸಾಕ್ಷಿ ಸುದ್ದಿ, ಡಂಬಳ

ನಮ್ಮ ದೇಶ ಸಾವಿರಾರು ದೇವರನ್ನು ಪೂಜಿಸುವ, ಆರಾಧಿಸುವ ಸಂಸ್ಕೃತಿ, ಪರಂಪರೆ, ಶ್ರೇಷ್ಠತೆಯ ಪ್ರತೀಕವಾಗಿದೆ. ಆ ಹಿನ್ನೆಲೆಯಲ್ಲಿ ಅಭಿವೃದ್ಧಿ ಜೊತೆಗೆ ದೇಸ್ಥಾನಗಳ ಜೀರ್ಣೋದ್ಧಾರಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ ಹೋಬಳಿಯ ಶಿವಾಜಿನಗರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದಿಂಡೂರ ಗ್ರಾಮದಲ್ಲಿ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳ ಂಯೋಜನೆಂಯಡಿಂಯಲ್ಲಿ ಲೋಕಾಮಸಂದ ದೇವಸ್ಥಾನದ ಕಾಮಗಾರಿ, ಶ್ರೀ ಸೇವಾಲಾಲ ಸಮುದಾಯ ಭವನ ಕಟ್ಟಡ ನಿರ್ಮಾಣ ಕಾಮಗಾರಿ, ಗುರೇಶ ಲಕ್ಕವ್ವ ದೇವಸ್ಥಾನದ ಜೀರ್ಣೋದ್ಧಾರ, ಗಿರೀಶ್ ಸೋಮಲಪ್ಪ ನಾಯಕ ಇವರ ಮನೆಯಿಂದ ಚಂದ್ರು ಲಾಲಪ್ಪ ನಾಯಕ ಇವರ ಮನೆಯವರೆಗೆ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗಳಿಗೆ ಭೂಮಿಪೂಜೆ ನೇರವೆರಿಸಿ ಮಾತನಾಡಿದರು.

ಸರ್ಕಾರದ ಅಭಿವೃದ್ಧಿ ಕೆಲಸಗಳು ಉಳಿಯುತ್ತವೆ. ಟೀಕೆಗಳು ಸಾಯುತ್ತವೆ. ಆದ್ದರಿಂದ ಯಾವುದೇ ಟೀಕೆಗೆ ಎದೆಗುಂದದೆ ಸರ್ಕಾರದ ಗ್ಯಾರಂಟಿ ಕಾರ್ಯಕ್ರಮಗಳು ಜನರನ್ನು ತಲುಪುತ್ತಿವೆ. ಚುನಾವಣಾ ಸಂದರ್ಭದಲ್ಲಿ ರಾಜ್ಯದ ಜನರಿಗೆ ಭರವಸೆ ನೀಡಿದಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ರಾಜ್ಯದ ಎಲ್ಲಾ ಜನರಿಗೆ ಒಂದಲ್ಲ ಒಂದು ಸೌಲಭ್ಯಗಳು ತಲುಪುವಂತೆ ಮಾಡುವಲ್ಲಿ ಸರ್ಕಾರ ಶ್ರಮಿಸುತ್ತಿದೆ. ರಾಜ್ಯದಲ್ಲಿ 56 ಸಾವಿರ ಕೋಟಿ ರೂ.ಗಳನ್ನು ವಾರ್ಷಿಕವಾಗಿ ಗ್ಯಾರಂಟಿ ಯೋಜನೆಗೆ ಬಳಸಲಾಗುತ್ತಿದೆ. ಶಕ್ತಿ ಯೋಜನೆಯಡಿ ರಾಜ್ಯದಲ್ಲಿ 600 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡಿದ್ದಾರೆ.

ಮುಂದೆ ಬರುವ ತಾಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಿನ ಶಕ್ತಿಯನ್ನು ನೀಡಬೇಕೆಂದು ಹೇಳಿದರು.

ಈ ಸಂಧರ್ಭದಲ್ಲಿ ತಾಲೂಕಾ ಕಾಂಗ್ರೆಸ್ ಅಧ್ಯಕ್ಷ ಡಿ.ಡಿ. ಮೋರನಾಳ, ಉಪಾಧ್ಯಕ್ಷ ಕುಮಾರಸ್ವಾಮಿ ಹಿರೇಮಠ, ಈಶಪ್ಪ ಓಲಿ, ಮುಖಂಡರಾದ ಮಹೇಶ ಗಡಗಿ, ಕುಬೇರ ನಾಯಕ, ಬಸವರಡ್ಡಿ ಬಂಡಿಹಾಳ, ಗೋಪಾಲ ಲಮಾಣಿ, ಬಾಬುಸಾಬ ಮೂಲಿಮನಿ, ಮಲ್ಲಿಕಾರ್ಜುನ ಪ್ಯಾಟಿ, ತೇಜಪ್ಪ ರಾಮಚಂದ್ರಪ್ಪ, ಗೋವಿಂದ ಲಮಾಣಿ, ನಾಗರಾಜ ಸಜ್ಜನ, ಶರಣಪ್ಪ ಚೆನ್ನಳ್ಳಿ, ಆನಂದ ಲಮಾಣಿ, ಕುಬೇರ ಲಮಾಣಿ, ಶಿವಪ್ಪ ನಾಯಕ, ಮಲ್ಲೇಶ ಲಮಾಣಿ, ಸಂತೋಷ ಲಮಾಣಿ, ಠಾಕೋರ ಲಮಾಣಿ, ಶಂಕ್ರಪ್ಪ ಲಮಾಣಿ, ಗಂಗಪ್ಪ ಲಮಾಣಿ, ಸೋಮು ನಾಯಕ ತಹಸೀಲ್ದಾರ ಯರಿಸ್ವಾಮಿ, ಸಿಪಿಐ ಯಶವಂತ ಬಿಸನಳ್ಳಿ, ಜಿ.ಪಂ ಕಾರ್ಯನಿರ್ವಾಹಕ ಅಭಿಯಂತರ ನರಲೇಕರ, ಆರ್‌ಡಬ್ಲುಎಸ್ ಮಂಜುನಾಥ ಕಲಬುರ್ಗಿ, ಕಂದಾಯ ಅಧಿಕಾರಿ ಪ್ರಭು ಬಾಗಲಿ ಸೇರಿದಂತೆ ಗ್ರಾಮದ ಹಿರಿಯರು, ಯುವಕರು, ಮಹಿಳೆಯರು ಇದ್ದರು.

> ಸರ್ಕಾರಿ ಬಸ್‌ನಲ್ಲಿ ಮಹಿಳೆಯರು ರಾಜ್ಯಾದ್ಯಂತ ಉಚಿತವಾಗಿ ಓಡಾಡಬಹುದಾಗಿದೆ. 200 ಯೂನಿಟ್‌ವರೆಗೆ ಉಚಿತ ವಿದ್ಯುತ್, ಗೃಹಲಕ್ಷ್ಮೀ ಯೋಜನೆಯಡಿ 2 ಸಾವಿರ ರೂ. ಕಲ್ಪಿಸಲಾಗುತ್ತದೆ. ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ. ಶಿವಕುಮಾರ್‌ರ ನೇತೃತ್ವದ ಸರ್ಕಾರ ಯಾವುದೇ ಧರ್ಮ, ಜಾತಿ ನೋಡಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿಲ್ಲ. ಸರ್ಕಾರದ ಗ್ಯಾರಂಟಿ ಯೋಜನೆಗಳು ಎಲ್ಲಾ ಜನರಿಗೂ ತಲುಪುತ್ತಿದ್ದು, ನುಡಿದಂತೆ ನಡೆಯುತ್ತಿರುವ ಸರ್ಕಾರ ನಮ್ಮದಾಗಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.





ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

ಜಲಸಂಪನ್ಮೂಲ ಇಲಾಖೆ

ಕರ್ನಾಟಕ ನೀರಾವರಿ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಉದ್ಯಮ)



ಶ್ರೀ ಡಿ. ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

ಬೆಣ್ಣೆಹಳ್ಳ ಪ್ರವಾಹ ನಿಯಂತ್ರಣ ಕಾಮಗಾರಿ ಶಂಕುಸ್ಥಾಪನೆ

ಹಾಗೂ ನವಲಗುಂದ ವಿಧಾನಸಭಾ ಕ್ಷೇತ್ರದ

ವಿವಿಧ ಕಾಮಗಾರಿಗಳ ಉದ್ಘಾಟನಾ, ಭೂಮಿಪೂಜಾ ಸಮಾರಂಭ



ದಿನಾಂಕ: 08-02-2026 | ಸಮಯ: ಮಧ್ಯಾಹ್ನ 3:00 ಗಂಟೆಗೆ

ಸ್ಥಳ: ಶಿರಗುಪ್ಪಿ, ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ



ಶಂಕುಸ್ಥಾಪನೆ

ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಘನ ಉಪಸ್ಥಿತಿ

ಶ್ರೀ ಬಸವರಾಜ ಎಸ್. ಹೊರಟ್ಟಿ
ಮಾನ್ಯ ಸಭಾಪತಿಗಳು
ಕರ್ನಾಟಕ ವಿಧಾನ ಪರಿಷತ್ತು

ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಜಲಸಂಪನ್ಮೂಲ, ಬೆಂಗಳೂರು ನಗರಾಭಿವೃದ್ಧಿ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರು, ಕರ್ನಾಟಕ ಸರ್ಕಾರ

ಶ್ರೀ ಪ್ರಹ್ಲಾದ ಜೋಶಿ
ಮಾನ್ಯ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಕೇಂದ್ರ ಸಚಿವರು ಭಾರತ ಸರ್ಕಾರ, ನವದೆಹಲಿ

ಗೌರವ ಉಪಸ್ಥಿತಿ

ಶ್ರೀ ಸಂತೋಷ ಎಸ್. ಲಾಡ್
ಮಾನ್ಯ ಕಾರ್ಮಿಕ ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರು

ಶ್ರೀ ಕೃಷ್ಣ ಬೈರೇಗೌಡ
ಮಾನ್ಯ ಕಂದಾಯ ಮತ್ತು ಹಾಸನ ಜಿಲ್ಲಾ ಉಸ್ತುವಾರಿ ಸಚಿವರು

ಶ್ರೀ ಎಚ್.ಕೆ. ಪಾಟೀಲ
ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರು

ಗೌರವ ಅತಿಥಿಗಳು

ಶ್ರೀ ಬಸವರಾಜ ಬೊಮ್ಮಾಯಿ
ಮಾನ್ಯ ಮಾಜಿ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ಹಾಗೂ ಲೋಕಸಭಾ ಸದಸ್ಯರು, ಹಾವೇರಿ

ವಿಶೇಷ ಅತಿಥಿಗಳು

ಶ್ರೀ ಅಬ್ಬಯ್ಯ ಪ್ರಸಾದ
ಮಾನ್ಯ ಅಧ್ಯಕ್ಷರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಹಾಗೂ ಮಾನ್ಯ ಶಾಸಕರು, ವಿಧಾನ ಸಭೆ, ಹುಬ್ಬಳ್ಳಿ-ಧಾರವಾಡ (ಪೂರ್ವ)

ಶ್ರೀ ಸಲೀಂ ಅಹ್ಮದ್
ಮಾನ್ಯ ಸರ್ಕಾರಿ ಮುಖ್ಯ ಸಚೇತಕರು
ಕರ್ನಾಟಕ ವಿಧಾನ ಪರಿಷತ್ತು

ಅಧ್ಯಕ್ಷತೆ

ಶ್ರೀ ಎನ್. ಹೆಚ್. ಕೋನರಡ್ಡಿ
ಮಾನ್ಯ ಶಾಸಕರು, ವಿಧಾನಸಭೆ, ನವಲಗುಂದ

ಧಾರವಾಡ ಹಾಗೂ ಗದಗ ಜಿಲ್ಲೆಯ ಎಲ್ಲಾ ಮಾನ್ಯ ಸಚಿವರು, ಸಂಸದರು, ವಿಧಾನಸಭಾ ಮತ್ತು ವಿಧಾನಪರಿಷತ್ತಿನ ಸದಸ್ಯರು ಹಾಗೂ ಎಲ್ಲಾ ಆಯೋಗ ಹಾಗೂ ನಿಗಮ ಮಂಡಳಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳಿಗೆ ಆತ್ಮೀಯ ಸ್ವಾಗತ

ಸೌಜನ್ಯದ ಉಪಸ್ಥಿತಿ

ಡಾ. ಶಾಲಿನಿ ರಜನೀಶ್, ಭಾ.ಆ.ಸೇ.
ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ

ಶ್ರೀ ಗೌರವ್ ಗುಪ್ತ, ಭಾ.ಆ.ಸೇ.
ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ಕರ್ನಾಟಕ ಸರ್ಕಾರ

ಸ್ವಾಗತ ಬಯಸುವವರು

ಶ್ರೀ ಕೃಷ್ಣಮೂರ್ತಿ ಬಿ. ಕುಲಕರ್ಣಿ, ಕೆ.ಇ.ಎಸ್
ಮಾನ್ಯ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ, ಕರ್ನಾಟಕ ಸರ್ಕಾರ

ಶ್ರೀ ರಾಜೇಶ ಅಮ್ಮಿನಭಾವಿ, ಕೆ.ಇ.ಎಸ್.
ಮಾನ್ಯ ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು

ಜಲವೇ ಜಗದ ಜೀವಾಳ | ಜಲವೇ ಅಮೂಲ್ಯ ಸಂಪತ್ತು | ಜಲ ಉಳಿಸಿ | ಜಲ ರಕ್ಷಿಸಿ

# ಚಿತ್ರಕಲೆಯಲ್ಲಿ ಅತ್ಯುತ್ತಮ ಕಲಾಪದಕ ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಕಲಾಕುಂಜ ಫೌಂಡೇಶನ್ ಆಫ್ ಆರ್ಟ್ಸ್ ಸೊಸೈಟಿ ಬರೇಲಿ ಯು.ಪಿ. ಇವರ ಸಂಯುಕ್ತ ಆಶ್ರಯದಲ್ಲಿ ನಡೆದ 4ನೇ ವರ್ಷದ ಕಲಾಮೇಳ-2026 ಉತ್ಸವದಲ್ಲಿ ರಾಜ್ಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಚಿತ್ರಕಲಾ ಸ್ಪರ್ಧೆ ಮತ್ತು ಚಿತ್ರಕಲಾ ಪ್ರದರ್ಶನ ಹಮ್ಮಿಕೊಳ್ಳಲಾಗಿತ್ತು.

ಸ್ಪರ್ಧೆಯಲ್ಲಿ ಗದಗ ಜಿಲ್ಲೆಯ ಎಂ.ಕೆ. ಕೊರ್ಲಹಳ್ಳಿ ಫೌಂಡೇಶನ್ ಟ್ರಸ್ಟ್ ಚಿತ್ರಕಲೆ ಕರಕುಶಲ ನೃತ್ಯ ಉಚಿತ ತರಬೇತಿ ಕೇಂದ್ರದ ವಿದ್ಯಾರ್ಥಿನಿ ಹಾಗೂ ರಾಯಲ್ ಇಂಗ್ಲೀಷ್ ಮೀಡಿಯಂ ಶಾಲೆಯ ಸದಾಫ ಖಾದರಸಾಬ ತಹಸೀಲ್ದಾರ ಭಾಗವಹಿಸಿ ಅತ್ಯುತ್ತಮ ಕಲಾಕೃತಿ ಪ್ರಶಸ್ತಿ ಮತ್ತು ಕಲಾಕುಂಜ ಪದಕ ಪಡೆದಿದ್ದಾರೆ.



ಈ ವಿದ್ಯಾರ್ಥಿನಿಗೆ ಚಿತ್ರಕಲೆ ಮತ್ತು ಕರಕುಶಲ ತರಬೇತಿ ನೀಡಿದ ಕಲಾವಿದ ಡಾ. ಜಾಕೀರಹುಸೇನ ಇವರಿಗೆ ನಗರದ ಎಂ.ಕೆ. ಫೌಂಡೇಶನ್ ಟ್ರಸ್ಟ್ ಅಧ್ಯಕ್ಷರಾದ ಜನಾಬ ಮೆಹಬೂಬಸಾಬ ಕೆ.ಕೊರ್ಲಹಳ್ಳಿ, ಮಂಜುನಾಥ ನಾಗಾವಿ, ಗಾಯತ್ರಿ ಭಜಂತ್ರಿ, ಗಜಾನನ ಕಟ್ಟಿ ಮತ್ತು ಸಿಬ್ಬಂದಿಗಳು ಹಾರ್ದಿಕ ಅಭಿನಂದನೆ ತಿಳಿಸಿದ್ದಾರೆ.



ಹಗರಿಬೊಮ್ಮನಹಳ್ಳಿ: ಹಿಂದೂ ಸಮಾವೇಶದ ಅಂಗವಾಗಿ ನಡೆದ ಬೃಹತ್ ಶೋಭಾಯಾತ್ರೆಗೆ ಆಗಮಿಸಿದ ಹಿಂದೂ ಸಮಾಜದ ಬಾಂಧವರಿಗೆ ಮುಸ್ಲಿಂ ಸಮಾಜದ ಯುವ ಮುಖಂಡರು ಕಲ್ಲಂಗಡಿ ಹಣ್ಣು, ಮ್ಯಾಂಗೋ ಜ್ಯೂಸ್ ಹಾಗೂ ನೀರಿನ ಬಾಟಲಿಗಳನ್ನು ವಿತರಿಸುವ ಮೂಲಕ ಸೌಹಾರ್ದತೆಯ ಸಂದೇಶ ನೀಡಿದರು. ಈ ಸಂದರ್ಭದಲ್ಲಿ ಎಸ್ ಡಿ ಎಮ್‌ಸಿ ಮಾಜಿ ಅಧ್ಯಕ್ಷ ಇಂತಿಯಾಜ್, ಕೆ. ಶ್ಯಾಬುದ್ದೀನ್, ಇಮಾಮ್ ಸಾಹೇಬ್ ಕರಿಮ್ ಸಾಹೇಬ್, ಅಸ್ಲಾಂ, ಭಾಷಾ ವಾಹಿದ್ ಸಾಹೇಬ್, ಮುನಾವರ್, ಜಾಹಿರ್ ಹುಸೇನ್, ಸಮೀರ್, ಮುಬಾರಕ್, ದಸ್ತಾಗೆರ್ ಪೇಂಟರ್, ಬಾಬು, ಯುಸೂಫ್ ಸಾಹೇಬ್, ಚಾಂದ್ ಭಾಷಾ, ದಾದಾಪೀರ್ ಸಾನಹೊಲ್ಲ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಈ ಕಾರ್ಯದಿಂದ ನಗರದಲ್ಲಿ ಧಾರ್ಮಿಕ ಸೌಹಾರ್ದತೆ ಮತ್ತು ಸಹಬಾಳ್ವೆಯ ಸಂದೇಶ ಹರಡಿತು.

## ನಿಗಮ ಮಂಡಳಿ ಕುರ್ಚಿ ಸಚಿವ ಕನಸಿಗೆ ಶಾಂತಿಯ ಮದ್ದೇ, ರಾಜಕೀಯ ಸಮಾಧಾನವೇ?!

# ಕುರ್ಚಿಗಿಂತ ಪ್ರಭಾವ ಮುಖ್ಯ!

ರೋಣ ಶಾಸಕ ಜಿ.ಎಸ್. ಪಾಟೀಲರಿಗೆ ಮತ್ತೊಮ್ಮೆ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡಿದ ಸರ್ಕಾರದ ನಿರ್ಧಾರ ಗದಗ ಜಿಲ್ಲೆಯ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ. ಕೆಲವರಿಗೆ ಇದು ಗೌರವದ ಹುದ್ದೆ ಎಂದು ಕಾಣಿಸಿದರೂ, ಸಚಿವ ಸ್ಥಾನದ ನಿರೀಕ್ಷೆಯಲ್ಲಿದ್ದ ಅಭಿಮಾನಿಗಳು ಮತ್ತು ಕಾಂಗ್ರೆಸ್ ಕಾರ್ಯಕರ್ತರಿಗೆ ಇದು ಸ್ಪಷ್ಟ ಸಂದೇಶವಾಗಿದೆ. ಸಚಿವ ಸ್ಥಾನಕ್ಕೆ ಬಾಗಿಲು ಮುಚ್ಚಿದಂತಾಗಿದೆ ಎಂಬ ಅಸಮಾಧಾನ, ತಿಂಗಳುಗಟ್ಟಲೆ ನಡೆದ ಹೋರಾಟ, ಮನವಿ, ಪ್ರತಿಭಟನೆಗಳ ನಡುವೆಯೇ ಬಂದ ಈ ನೇಮಕ ರಾಜಕೀಯ ಸಮಾಧಾನಕ್ಕೆ ನೀಡಿದ ಮದ್ದೇ ಹೊರತು ನಿಜವಾದ ಉತ್ತರವಲ್ಲ ಎಂಬ ಮಾತು ಕಾರ್ಯಕರ್ತರ ವಲಯದಲ್ಲಿ ಕೇಳಿಬರುತ್ತಿದೆ.

ಹೋರಾಟದ ಉರಿ: ರೋಣ ಮತಕ್ಷೇತ್ರದಲ್ಲಿ ನಡೆದ ಪ್ರತಿಭಟನೆಗಳು ಸಾಮಾನ್ಯ ರಾಜಕೀಯ ಪ್ರದರ್ಶನಗಳಾಗಿರಲಿಲ್ಲ. ಗಜೇಂದ್ರಗಡ ಪಟ್ಟಣದಲ್ಲಿ ಕಾರ್ಯಕರ್ತನೊಬ್ಬ ಪೆಟ್ರೋಲ್ ಸುರಿದು ಆತ್ಮಹತ್ಯೆಗೆ ಯತ್ನಿಸಿದ ಘಟನೆ ಕಾರ್ಯಕರ್ತರ ನೋವನ್ನು ತೀವ್ರವಾಗಿ ತೋರಿಸಿತು. ರೋಣ ನಗರದಲ್ಲಿ ನಡೆದ ರ್‍ಯಾಲಿಗಳಲ್ಲಿ ತಲೆ ಬೋಳಿಸಿಕೊಂಡು ಪ್ರತಿಭಟನೆ ನಡೆಸಿದ ಘಟನೆಗಳು ಪಕ್ಷದೊಳಗಿನ ಬೇಸರದ ಪ್ರತಿಬಿಂಬವಾಗಿದ್ದವು. ಸ್ಥಳೀಯ ಸಂಸ್ಥೆಗಳ ಕೆಲ ಜನಪ್ರತಿನಿಧಿಗಳು ರಾಜೀನಾಮೆ ನೀಡುವ ಬೆದರಿಕೆ ಹಾಕಿದ್ದು ಕಾರ್ಯಕರ್ತರ ನಿರಾಶೆ ಎಷ್ಟರ ಮಟ್ಟಿಗೆ ತಲುಪಿತ್ತು ಎಂಬುದನ್ನು ತೋರಿಸಿತು. ಇಷ್ಟೆಲ್ಲ ಹೋರಾಟದ ಬಳಿಕವೂ ಸಚಿವ ಸ್ಥಾನ ಸಿಗದೆ ನಿಗಮ ಮಂಡಳಿ ಹುದ್ದೆ ನೀಡಿರುವುದು ಕಾರ್ಯಕರ್ತರ ಹೃದಯಕ್ಕೆ ನೀಡಿದ ಹೊಡೆತವಾಗಿದೆ.



ಅವಕಾಶ ಕೈತಪ್ಪಿದೇಕೆ?: ಜಿ.ಎಸ್. ಪಾಟೀಲರು ಅನುಭವಸಂಪನ್ನ ರಾಜ-ಕಾರಣಿ. ಬಡವರ, ದೀನ-ದಲಿತರ ಪರ ನಿಂತ ನಾಯಕ ಎಂಬ ಹೆಸರಿದೆ. ಸಾವಿರ ಕೆರೆಗಳ ಸರದಾರ ಎಂಬ ಜನಪ್ರಿಯ ಬಿರುದು ಕೂಡ ಅವರಿಗಿದೆ. ಕಾಂಗ್ರೆಸ್ ಪಕ್ಷದ ಜಿಲ್ಲಾಧ್ಯಕ್ಷರಾಗಿ ಹೈಕಮಾಂಡ್ ನೀಡಿದ ಜವಾಬ್ದಾರಿಯನ್ನು ಸಮರ್ಪಕವಾಗಿ ನಿಭಾಯಿಸಿದ್ದಾರೆ. ಪಕ್ಷಕ್ಕಾಗಿ ಹಗಲಿರುಳು ದುಡಿದಿದ್ದಾರೆ ಎಂಬ ಮಾತು ಕಾರ್ಯಕರ್ತರಲ್ಲಿ ಸಾಮಾನ್ಯ. ಇಂತಹ ನಾಯಕನಿಗೆ ಸಚಿವ ಸ್ಥಾನ ದೊರೆಯಬೇಕೆಂದು ಅಭಿಮಾನಿಗಳು ನಿರೀಕ್ಷೆ ಇಟ್ಟಿದ್ದರು. ಆದರೆ ರಾಜಕೀಯದಲ್ಲಿ ಸೇವೆ ಮಾತ್ರ ಸಾಕಾಗುವುದಿಲ್ಲ. ಒಳರಾಜಕೀಯದ ಸಮೀಕರಣಗಳು, ಪ್ರಭಾವ ಮತ್ತು ಸಮಯವೇ ಮುಖ್ಯ ಎಂಬುದನ್ನು ಈ ನೇಮಕ ಮತ್ತೆ ನೆನಪಿಸಿದೆ.

ಸಮೀಕರಣದ ನಿಜ ಮುಖ: ಗದಗ ಜಿಲ್ಲೆಯ ರಾಜಕೀಯದಲ್ಲಿ ಎಚ್.ಕೆ. ಪಾಟೀಲರ ಪ್ರಭಾವ ಎಲ್ಲರಿಗೂ ತಿಳಿದ ವಿಷಯ. ರಾಜ್ಯ ಮಟ್ಟದಲ್ಲಿ ಹಿರಿಯ ನಾಯಕತ್ವ, ಆಡಳಿತದೊಳಗಿನ ಹಿಡಿತ ಮತ್ತು ನಿರ್ಣಯಗಳಲ್ಲಿ ಅವರ ಮಾತಿನ ತೂಕ ಇವೆಲ್ಲವೂ ಜಿಲ್ಲೆಯ ರಾಜಕೀಯ ಸಮೀಕರಣಗಳನ್ನು ಬದಲಿಸುವ ಸಾಮರ್ಥ್ಯ ಹೊಂದಿವೆ. ಸಚಿವ ಸ್ಥಾನ ಹಂಚಿಕೆಯಲ್ಲಿ ಎಚ್.ಕೆ. ಪಾಟೀಲರ ಪ್ರಭಾವ ಸ್ಪಷ್ಟವಾಗಿ ಕೆಲಸ ಮಾಡಿದೆ ಎಂಬ ಮಾತು ಕಾಂಗ್ರೆಸ್ ವಲಯದಲ್ಲಿ ಕೇಳಿಬರುತ್ತಿದೆ. ರೋಣ ಕ್ಷೇತ್ರದ ಹೋರಾಟಗಳಿಗಿಂತ ಗದಗ ರಾಜಕೀಯದ ಸಮತೋಲನವೇ ಸರ್ಕಾರದ ಅಂತಿಮ ನಿರ್ಧಾರವನ್ನು ನಿರ್ಧರಿಸಿತು ಅನುಮಾನದ ಅಭಿಪ್ರಾಯ ಬಲವಾಗುತ್ತಿದೆ.

ಸಮತೋಲನದ ಹೆಸರಿನಲ್ಲಿ ಸಮಾಧಾನ: ಸರ್ಕಾರಕ್ಕೆ ಸಚಿವ ಸಂಪುಟದಲ್ಲಿ ಜಾತಿ, ಪ್ರದೇಶ, ಪಕ್ಷದ ಒಳಸಮಾಧಾನ ಎಲ್ಲವೂ ಮುಖ್ಯ. ಎಲ್ಲರಿಗೂ ಸಚಿವ ಸ್ಥಾನ ನೀಡಲು ಸಾಧ್ಯವಿಲ್ಲ ಎಂಬ ವಾಸ್ತವವನ್ನು ಸರ್ಕಾರ ನಿಗಮ ಮಂಡಳಿ ಹುದ್ದೆಗಳ ಮೂಲಕ ಸಮಾಧಾನಪಡಿಸುತ್ತದೆ. ಆದರೆ ಈ ಸಮಾಧಾನ ಕಾರ್ಯಕರ್ತರ ಮನಸ್ಸಿಗೆ ಶಾಂತಿ ತರಬಹುದೇ ಎಂಬುದು ಪ್ರಶ್ನೆ. ಹುದ್ದೆ ನೀಡಿದರೂ ನಿರೀಕ್ಷೆ ಮುರಿದ ನೋವು ಕಡಿಮೆಯಾಗುವುದಿಲ್ಲ. ಸರ್ಕಾರಕ್ಕೆ ಇದು ರಾಜಕೀಯ ಸಮತೋಲನವಾಗಬಹುದು, ಆದರೆ ಕ್ಷೇತ್ರದ ಮಟ್ಟದಲ್ಲಿ ಇದು ಅಸಮಾಧಾನದ ಬೀಜವಾಗುವ ಸಾಧ್ಯತೆ ಇದೆ.

ಶಾಸಕರಿಗೆ ಆತ್ಮಪರಿಶೀಲನೆಯ ಸಮಯ: ಜಿ.ಎಸ್. ಪಾಟೀಲರಿಗೂ ಇದು ಮಹತ್ವದ ಕ್ಷಣ. ತಮ್ಮ ಬೆಂಬಲಿಗರ ಹೋರಾಟದ ನಡುವೆಯೂ ಸಚಿವ ಸ್ಥಾನ ಸಿಗದಿದ್ದರೆ ನಾಯಕತ್ವದ ಒಳಗಿನ ಮಾತುಕತೆಗಳಲ್ಲಿ ಎಲ್ಲಿ ಕೊರತೆ ಉಂಟಾಯಿತು ಎಂಬುದನ್ನು ಪರಿಶೀಲಿಸಬೇಕಾಗಿದೆ. ನಿಗಮ ಮಂಡಳಿ ಹುದ್ದೆಯನ್ನು ಕೇವಲ ಸಮಾಧಾನ ಹುದ್ದೆಯಾಗಿ ನೋಡುವುದೇ ಅಥವಾ ಅದನ್ನೇ ಪರಿಣಾಮಕಾರಿ ಕಾರ್ಯದ ಮೂಲಕ ತಮ್ಮ ರಾಜಕೀಯ ಬಲವಾಗಿ ರೂಪಿಸಿಕೊಳ್ಳುವುದೇ? ಎಂಬುದೇ ಮುಂದಿನ ಸವಾಲು. ಹುದ್ದೆಯನ್ನು ಸಾಧನೆಯ ವೇದಿಕೆಯಾಗಿಸಿದರೆ ಭವಿಷ್ಯದಲ್ಲಿ ಮತ್ತೆ ಅವಕಾಶ ಸಿಗಬಹುದು.

ಕಾರ್ಯಕರ್ತರಿಗೆ ಕಠಿಣ ಪಾಠ: ಭಾವನಾತ್ಮಕ ಪ್ರತಿಭಟನೆಗಳು ರಾಜಕೀಯದಲ್ಲಿ ಶಾಶ್ವತ ಫಲ ನೀಡುವುದಿಲ್ಲ. ತಲೆ ಮುಂಡಿಸುವುದು, ಆತ್ಮಹತ್ಯೆ ಯತ್ನ ಇವೆಲ್ಲವೂ ಸುದ್ದಿಯ ವಿಷಯವಾಗಬಹುದು. ಆದರೆ ನಿರ್ಧಾರಗಳ ಮೇಲೆ ಶಾಶ್ವತ ಪ್ರಭಾವ ಬೀರುವುದಿಲ್ಲ. ಪಕ್ಷದೊಳಗಿನ ಸಂಘಟನೆ ಬಲಪಡಿಸುವುದು, ತಂತ್ರಜ್ಞಾನಪೂರಿತ ಹೋರಾಟ, ನಾಯಕತ್ವದೊಂದಿಗೆ ನಿರಂತರ ಸಂವಾದ ಇವೆಲ್ಲ ಪರಿಣಾಮಕಾರಿ ಮಾರ್ಗಗಳು. ಇಲ್ಲದಿದ್ದರೆ ಕಾರ್ಯಕರ್ತರ ನೋವು ಕೇವಲ ರಾಜಕೀಯ ಸುದ್ದಿಯಾಗಿ ಉಳಿಯುತ್ತದೆ.

ಕುರ್ಚಿಗಿಂತ ಪ್ರಭಾವ ಮುಖ್ಯ: ಈ ನೇಮಕ ಸರ್ಕಾರದ ರಾಜಕೀಯ ಲೆಕ್ಕಾಚಾರದ ಸ್ಪಷ್ಟ ಉದಾಹರಣೆ. ಜಿ.ಎಸ್. ಪಾಟೀಲರ ಸೇವೆಯನ್ನು ಗೌರವಿಸುವ ಹೆಸರಿನಲ್ಲಿ ನೀಡಿದ ಹುದ್ದೆ. ಆದರೆ, ಸಚಿವ ಸ್ಥಾನಕ್ಕೆ ಹಾಕಿದ ಅಂತರದ ಗಡಿ ಎಂಬ ಸಂದೇಶವೂ ಇದೆ. ಗದಗ ಜಿಲ್ಲೆಯ ರಾಜಕೀಯದಲ್ಲಿ ಎಚ್.ಕೆ. ಪಾಟೀಲರ ಪ್ರಭಾವ ಮತ್ತೊಮ್ಮೆ ಗೋಚರಿಸಿದೆ. ಈಗ ಜಿ.ಎಸ್. ಪಾಟೀಲರು ಈ ಹುದ್ದೆಯನ್ನು ಹೇಗೆ ಬಳಸಿಕೊಳ್ಳುತ್ತಾರೆ ಎಂಬುದೇ ಮುಖ್ಯ. ಸರ್ಕಾರದ ಶಾಂತಿ ಮದ್ದನ್ನು ಒಪ್ಪಿಕೊಂಡು ಮೌನವಾಗುತ್ತಾರಾ ಅಥವಾ ತಮ್ಮ ಕಾರ್ಯದ ಮೂಲಕ ಮತ್ತೆ ಸಚಿವ ಸ್ಥಾನಕ್ಕಾಗಿ ರಾಜಕೀಯ ನೆಲೆ ನಿರ್ಮಿಸುತ್ತಾರಾ? ಎಂಬುದನ್ನು ಜಿಲ್ಲೆಯ ಜನ ಗಮನದಿಂದ ನೋಡುತ್ತಿದ್ದಾರೆ. ರಾಜಕೀಯದಲ್ಲಿ ಕುರ್ಚಿ ಸಿಗುವುದು ಒಂದು ಹಂತ. ಆದರೆ ಪ್ರಭಾವ ಕಟ್ಟುವುದು ನಾಯಕನ ಕೈಯಲ್ಲೇ ಇದೆ ಎಂಬುವುದು ರಾಜಕೀಯ ವಿಶ್ಲೇಷಕರ ಮಾತು.

**– ಸಿಕಂದರ ಎಂ.ಆರಿ.**
ಪತ್ರಕರ್ತರು.

## ಅಂಡರ್ 19ನಲ್ಲಿ ಶ್ರೀಲಂಕಾ ಕ್ಲಬ್ ಟೀಂ ಜೊತೆಗೆ ಆಡಿ ಸೈ ಎನಿಸಿದ ಗದುಗಿನ ಶಶಾಂಕ ಮೆಣಸಿನಕಾಯಿ


# ಕ್ರಿಕೆಟ್ ಲೋಕದ ಭರವಸೆಯ ಆಟಗಾರ

ಗದುಗಿನ 17 ವರ್ಷದ ಹುಡುಗ ಈಗ ತಾಲೂಕು, ಜಿಲ್ಲಾ ಮತ್ತು ರಾಜ್ಯಮಟ್ಟದ ಹಲವು ಪಂದ್ಯಗಳನ್ನು ಆಡಿದ ನಂತರ ಕ್ರಿಕೆಟ್‌ನಲ್ಲಿ ಮಿಂಚುತ್ತಿದ್ದಾರೆ. ಗದಗ ಪಟ್ಟಣದ ಶಶಾಂಕ್ ಮೆಣಸಿನಕಾಯಿ ಕರ್ನಾಟಕ ಪ್ರೀಮಿಯರ್ ಲೀಗ್ (ಕೆಪಿಎಲ್) ಮತ್ತು 19 ವರ್ಷದೊಳಗಿನ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್)ಗೆ ಹೋಗಲು ಪ್ರಯತ್ನಿಸುತ್ತಿದ್ದಾರೆ ಮತ್ತು ಇದುವರೆಗೆ ಆಡಿದ ಪಂದ್ಯಗಳಲ್ಲಿನ ಸ್ಕೋರ್ ಅಂಕಿ-ಅಂಶಗಳು ಅವರಿಗೆ ಭರವಸೆಯ ಎಲ್ಲಾ ಅವಕಾಶಗಳಿವೆ ಎಂದು ಸಾರಿ ಹೇಳುತ್ತವೆ.

ಅವರು ಬೆಂಗಳೂರಿನ ರೈಸಿಂಗ್ ಸ್ಟಾರ್ ಕ್ರಿಕೆಟ್ ಅಕಾಡೆಮಿಯ ತಂಡದಲ್ಲಿದ್ದಾರೆ. ಇತ್ತೀಚೆಗೆ ಶಶಾಂಕ್ ಬೆಂಗಳೂರಿನಲ್ಲಿ ಶ್ರೀಲಂಕಾ ಕ್ಲಬ್ ಟೀಂ ವಿರುದ್ಧ ಅಂಡರ್ 19 ಪಂದ್ಯವನ್ನು ಆಡಿದ್ದಾರೆ. ಅವರ ತರಬೇತುದಾರರು ಈಗ ಬೆಂಗಳೂರಿನಲ್ಲಿ ಅವರಿಗೆ ಮಾರ್ಗದರ್ಶನ ನೀಡುತ್ತಿದ್ದಾರೆ. ಶಶಾಂಕ್ ಓರ್ವ ಉತ್ತಮ ಬ್ಯಾಟ್ಸ್‌ಮನ್ ಮತ್ತು ಉತ್ತಮ ಫೀಲ್ಡರ್ ಕೂಡ ಹೌದು. ಅವರ ವೃತ್ತಿಜೀವನದಲ್ಲಿ ಅರ್ಧ ಶತಕ ಮತ್ತು ಹಲವಾರು ಶತಕಗಳನ್ನು ಬಾರಿಸಿದ್ದಾರೆ. ಕಳೆದ ಎರಡು ವರ್ಷಗಳಿಂದ ಬೆಂಗಳೂರಿನ ರೈಸಿಂಗ್ ಸ್ಟಾರ್ ಜೊತೆ ಆಟವಾಡಲು ಪ್ರಾರಂಭಿಸಿದ್ದಾರೆ. ಶಶಾಂಕ ಅವರಂಥ ಇನ್ನೂ ಹೆಚ್ಚು ಪ್ರತಿಭೆಗಳು ರಾಜ್ಯ ಮಟ್ಟದಲ್ಲಿ ಮತ್ತು ರಾಷ್ಟ್ರ ಮಟ್ಟದಲ್ಲಿ ಮಿಂಚಲಿ ಎಂಬುದು ಗದಗ ಜನರ ಆಶಯ.

ಶಶಾಂಕ್ 9ನೇ ತರಗತಿಯಲ್ಲಿದ್ದಾಗ ಕ್ರಿಕೆಟ್ ವೃತ್ತಿಜೀವನವನ್ನು ಪ್ರಾರಂಭಿಸಿದರು. ಅವರು ಬಾಲ್ಯದಲ್ಲಿ ಉತ್ತಮ ಆಟಗಾರರಾಗಿದ್ದರು. ಆದರೆ ಅವರು ಶಾಲಾ ಮಟ್ಟದ ಮತ್ತು ಸ್ನೇಹಿತರ ಮಟ್ಟದ ಪಂದ್ಯಗಳನ್ನು ಆಡುತ್ತಿದ್ದರು. ಅವರ ಕುಟುಂಬವು ಬೆಂಗಳೂರಿಗೆ ಸ್ಥಳಾಂತರಗೊಂಡ ನಂತರ ಅವರು ಪ್ರಾದೇಶಿಕ ಪಂದ್ಯಗಳಿಗೆ ಆಡಲು ಪ್ರಾರಂಭಿಸಿದರು. ಶಶಾಂಕ್ ತಮ್ಮ ಕ್ರಿಕೆಟ್ ಮೇಲಿನ ಕ್ರೇಜ್ ಬಗ್ಗೆ ಪೋಷಕರಿಗೆ ತಿಳಿಸಿ, ಅಕಾಡೆಮಿಗೆ ಸೇರಲು ಆಶಯ ವ್ಯಕ್ತಪಡಿಸಿದರು. ಪೋಷಕರು ಶೈಕ್ಷಣಿಕವಾಗಿ ಉತ್ತಮನಾಗುವ ಭರವಸೆಯೊಂದಿಗೆ ಒಪ್ಪಿಕೊಂಡರು. ಶಶಾಂಕ್ ಗದಗದಿಂದ ಶಾಸಕ ಆಕಾಂಕ್ಷಿಯಾಗಿ ಸ್ಪರ್ಧಿಸಿದ್ದ ಅನಿಲ್ ಮೆಣಸಿನಕಾಯಿ ಅವರ ಪುತ್ರ.

ಆಟದ ಬಗ್ಗೆ ಶಶಾಂಕ್ ಹೇಳಿದ್ದು ಹೀಗೆ, "ನಾನು ಚೆನ್ನಾಗಿ ಆಡಲು ನನ್ನ ಶಕ್ತಿ ಮೀರಿ ಪ್ರಯತ್ನಿಸುತ್ತಿದ್ದೇನೆ. ಅವಕಾಶ ಸಿಕ್ಕರೆ ಖಂಡಿತವಾಗಿಯೂ ಚೆನ್ನಾಗಿ ಆಡುತ್ತೇನೆ. ನನಗೆ ಮಾರ್ಗದರ್ಶನ ನೀಡುವ ಉತ್ತಮ ತರಬೇತುದಾರ, ಪೋಷಕರು ಮತ್ತು ಬೆಂಬಲ ನೀಡುವ ಸ್ನೇಹಿತರು ಸಿಕ್ಕಿರುವುದು ನನ್ನ ಅದೃಷ್ಟ. ನಾನು ಕಷ್ಟಪಟ್ಟು ಕೆಲಸ ಮಾಡುತ್ತೇನೆ ಮತ್ತು ಪ್ರತಿದಿನ ಅಭ್ಯಾಸ ಮಾಡುತ್ತೇನೆ".



ಶಶಾಂಕ್ ಅವರ ತರಬೇತುದಾರ ವಿದ್ಯಾಸಾಗರ್ "ಕ್ರಿಕೆಟ್ ವಿದ್ಯಾರ್ಥಿಯಾಗಿ, ಶಶಾಂಕ್ ಅತ್ಯುತ್ತಮ ಬದ್ಧತೆ ಮತ್ತು ಸ್ಥಿರತೆಯನ್ನು ತೋರಿಸುತ್ತಾನೆ. ಅವನು ಪ್ರತಿ ಅವಧಿಯನ್ನು ಗಮನದಿಂದ ಸಮೀಪಿಸುತ್ತಾನೆ, ಆಟವನ್ನು ಗೌರವಿಸುತ್ತಾನೆ. ನಿರಂತರವಾಗಿ ತನ್ನ ಕೌಶಲ್ಯಗಳನ್ನು ಸುಧಾರಿಸುವಲ್ಲಿ ಕೆಲಸ ಮಾಡುತ್ತಾನೆ. ಅವನು ಶೀಘ್ರದಲ್ಲೇ ಕೆಪಿಎಲ್‌ನಲ್ಲಿ ಆಯ್ಕೆಯಾಗುತ್ತಾನೆ ಎಂಬ ಭರವಸೆಯಿದೆ" ಎಂದಿದ್ದಾರೆ.

ತಂದೆ ಅನಿಲ್ ಮೆಣಸಿನಕಾಯಿ, "ಕ್ರಿಕೆಟ್‌ನಲ್ಲಿ ಅವನ ಆಸಕ್ತಿಯ ಬಗ್ಗೆ ನಮಗೆ ತಿಳಿದಾಗ, ನಾವು ಅವನ ಸ್ನೇಹಿತರೊಂದಿಗೆ ಚರ್ಚಿಸಿ ಉತ್ತಮ ತರಬೇತುದಾರನನ್ನು ಹುಡುಕಿ ಅಕಾಡೆಮಿಗೆ ಸೇರಲು ಹೇಳಿದೆವು. ನಂತರ ಅವನು ರೈಸಿಂಗ್ ಸ್ಟಾರ್ ಕ್ರಿಕೆಟ್ ಅಕಾಡೆಮಿಗೆ ಸೇರಿದ. ಅವನು ಇಷ್ಟು ಚೆನ್ನಾಗಿ ಆಡುತ್ತಾನೆಂದು ನಮಗೆ ತಿಳಿದಿರಲಿಲ್ಲ. ಅವನು ಶೀಘ್ರದಲ್ಲೇ ಕೆಪಿಎಲ್ ಅಥವಾ ಐಪಿಎಲ್‌ನಲ್ಲಿ ಆಯ್ಕೆಯಾಗುತ್ತಾನೆ" ಎಂಬ ಭರವಸೆ ವ್ಯಕ್ತಪಡಿಸಿದ್ದಾರೆ.

**– ಮೌನೇಶ್ ಭಜಂತ್ರಿ,** ಗದಗ.




ಗದಗ ನಗರದ ಮುಳಗುಂದ ರಸ್ತೆಯ ಪತ್ರಿಕಾ ಭವನದಲ್ಲಿ ಪ್ರವೇಶ ದ್ವಾರದ ನಾಮಫಲಕ ಅನಾವರಣವನ್ನು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹಾಗೂ ಗದಗ-ಹಾವೇರಿ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ ನೆರವೇರಿಸಿದರು. ಕಾ.ನಿ.ಪ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಕಾ.ನಿ.ಪ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ, ರಾಜ್ಯ ಕಾರ್ಯಕಾರಿಣಿ ಸದಸ್ಯ ಅರುಣಕುಮಾರ ಹಿರೇಮಠ, ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಸೇರಿದಂತೆ ಇತರರು ಇದ್ದರು.




ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ ಆಡಳಿತಾತ್ಮಕ ನ್ಯಾಯಾಧೀಶರಾದ ನ್ಯಾ.ಮೂ ಜಿ. ಬಸವರಾಜ ಅವರು ಶನಿವಾರ ಲಕ್ಕುಂಡಿಯಲ್ಲಿ ವಸ್ತು ಸಂಗ್ರಹಾಲಯ, ಜೈನ್ ಬಸದಿ, ಕೋಟೆ ವೀರಭದ್ರೇಶ್ವರ ದೇವಸ್ಥಾನ ಹಾಗೂ ಉತ್ಖನನದ ಸ್ಥಳಗಳನ್ನು ವೀಕ್ಷಿಸಿದರು. ಈ ಸಂದರ್ಭದಲ್ಲಿ ಗದಗ ಜಿಲ್ಲಾ ಪ್ರದಾನ ಮತ್ತು ಸತ್ರ ನ್ಯಾಯಾಧೀಶರಾದ ನಾಗವೇಣಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಆರ್.ಜಿ. ಕಲ್ಲೂರ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತಕರಾದ ಡಾ. ಶರಣು ಗೋಗೇರಿ, ಸಮಿತಿ ಸದಸ್ಯರಾದ ಅ.ದ. ಕಟ್ಟಿಮನಿ, ಪೊಲೀಸ್ ಇಲಾಖೆ ಅಧಿಕಾರಿಗಳು ಹಾಜರಿದ್ದರು.

## ಶಿರಹಟ್ಟಿ ತಾಲೂಕಿನಲ್ಲಿ ಕರ ವಸೂಲಿಗಾಗಿ ವಿಶೇಷ ಅಭಿಯಾನ

# ಶೇ. 75.57 ಕರ ವಸೂಲಾತಿಯ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ಕರ ವಸೂಲಿ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಪ್ರಸ್ತುತ ನಡೆದ ಕರ ವಸೂಲಿ ಅಭಿಯಾನದಲ್ಲಿ 11802648 ರೂ ಹಣ ತೆರಿಗೆ ಸಂಗ್ರಹಣೆ ಮಾಡಲಾಗಿದ್ದು, ಇದು ಎಲ್ಲರ ಗಮನ ಸೆಳೆಯುವದರೊಂದಿಗೆ ಮೇಲಾಧಿಕಾರಿಗಳ ಪ್ರಶಂಸೆಗೆ ಪಾತ್ರವಾಗಿದೆ.

ಈ ನಿಟ್ಟಿನಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಮಣ್ಣ ದೊಡ್ಡಮನಿ ಹೆಬ್ಬಾಳ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಸ್ವತಃ ಕರ ವಸೂಲಿ ಮಾಡುವದರ ಜೊತೆಗೆ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಎಲ್ಲಾ ಸಿಬ್ಬಂದಿಗಳೂ ಕಳೆದ ಒಂದು ತಿಂಗಳಿಂದ ಅಭಿಯಾನದ ರೂಪದಲ್ಲಿ ಕರ ವಸೂಲಾತಿ ಆಂದೋಲನ ಹಮ್ಮಿಕೊಂಡಿದ್ದರಿಂದ ಪ್ರಸಕ್ತ ಸಾಲಿನಲ್ಲಿ ತಾಲ್ಲೂಕಿನ ರೂ. 1,57,12,122ಗಳ ಒಟ್ಟು ಬೇಡಿಕೆಯಲ್ಲಿ ರೂ. 1,18,02,648 ಕರ ವಸೂಲಿಯಾಗಿ ಪ್ರಸ್ತುತ ಶೇ. 75.57 ಕರ ವಸೂಲಾತಿಯಾಗಿದೆ ಎಂದು ಹೇಳಿದರು. ಆನ್‌ಲೈನ್ ಪಾವತಿ ವ್ಯವಸ್ಥೆ ಹಾಗೂ ಡಿಜಿಟಲ್ ಸೇವೆಗಳ ಅನುಷ್ಠಾನದಿಂದ ತೆರಿಗೆ ಪಾವತಿ ಸುಲಭವಾಗಿ ಸಮಯಕ್ಕೆ ಸರಿಯಾಗಿ ನಡೆಯಬೇಕು. ತೆರಿಗೆ ಬಾಕಿದಾರರ ಕುರಿತು ಜಾಗೃತಿ ಅಭಿಯಾನ, ಮನೆ ಮನೆ ಭೇಟಿ ಹಾಗೂ ಸಭೆಗಳ ಮೂಲಕ ಸಾರ್ವಜನಿಕರಲ್ಲಿ ತೆರಿಗೆ ಪಾವತಿಯ ಮಹತ್ವವನ್ನು ಅರಿವು ಮೂಡಿಸಬೇಕು ಎಂದು ತಿಳಿಸಿದರು.




ಕಡಿಮೆ ಪ್ರಗತಿ ಸಾಧಿಸಿರುವ ಗ್ರಾಮ ಪಂಚಾಯಿತಿಗಳ ಕಾರ್ಯದರ್ಶಿ ಹಾಗೂ ಕರ ವಸೂಲಾತಿಗಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ, ಪ್ರಸಕ್ತ ಆರ್ಥಿಕ ವರ್ಷದ ಮುಕ್ತಾಯಕ್ಕೆ ಪೂರ್ವ ಶೇ.100ರಷ್ಟು ಪ್ರಗತಿ ಸಾಧಿಸಲು ರಾಮಣ್ಣ ದೊಡ್ಡಮನಿ ತಿಳಿಸಿದರು.

ಪ್ರತಿ ಗ್ರಾ.ಪಂ ವ್ಯಾಪ್ತಿಯಲ್ಲಿ ಅತಿ ಹೆಚ್ಚು ತೆರಿಗೆ ಬಾಕಿ ಉಳಿಸಿಕೊಂಡಿರುವ ಕನಿಷ್ಠ 200 ಆಸ್ತಿ ಮಾಲೀಕರನ್ನು ಗುರುತಿಸಿ ಅವರಿಗೆ ತಗಾದೆ ನೋಟಿಸು ನೀಡಿ ತೆರಿಗೆ ವಸೂಲಿ ಮಾಡಬೇಕು. ತೆರಿಗೆ ಪಾತಿಸದೇ ಬಾಕಿ ಉಳಿಸಿಕೊಂಡಿರುವ ಮೊಬೈಲ್ ಟವರ್ ಕಂಪನಿಗಳಿಗೆ ನೋಟಿಸು ಜಾರಿ ಮಾಡಿ, ಸಂಪೂರ್ಣ ಮೊತ್ತ ಪಾವತಿಸಿಕೊಳ್ಳುವುದು. ತೆರಿಗೆ ಪಾವತಿ ಬಾಕಿ ಹೊಂದಿರುವ ಅಂಗಡಿ ಮಾಲೀಕರು, ಉದ್ದಿಮೆದಾರರು, ಸರ್ಕಾರಿ ನೌಕರರರಿಗೆ ನೋಟಿಸು ನೀಡಿ ಶೇ. 100ರಷ್ಟು ಬಾಕಿ ವಸೂಲಿ ಮಾಡಲು ಸೂಚಿಸಲಾಗಿತ್ತು. ಅದರಂತೆ ಅಭಿಯಾನದ ದಿನದಂದು ಕರ ವಸೂಲಿ ಮಾಡಲಾಗಿದೆ.

## ಶ್ರೀ ಸಂತಕವಿ ಸರ್ವಜ್ಞ ಜಯಂತಿ ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಸಂತಕವಿ ಸರ್ವಜ್ಞ ಜಯಂತಿಯನ್ನು ಫೆ. 20ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಶನಿವಾರ ಶ್ರೀ ಸಂತಕವಿ ಸರ್ವಜ್ಞ ಜಯಂತಿ ಕುರಿತು ಜರುಗಿದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಹಾಸ್ಟೆಲ್, ಶಾಲಾ-ಕಾಲೇಜು, ಗ್ರಾಮ ಪಂಚಾಯಿತಿಯಲ್ಲಿ ಶ್ರೀ ಸಂತಕವಿ ಸರ್ವಜ್ಞ ಜಯಂತಿಯನ್ನು ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕು. ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳಿಗೆ ಸನ್ಮಾನ ನಡೆಸುವ ಕಾರ್ಯಕ್ರಮವಿದೆ. ಸಾಧನೆಗೈದ ಸಮಾಜದ ಹಿರಿಯರಿಗೆ ಸನ್ಮಾನ ಕಾರ್ಯಕ್ರನವಿದೆ.



ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಶ್ರೀ ಸಂತಕವಿ ಸರ್ವಜ್ಞ ಅವರ ಕುರಿತು ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ ಎಂದು ತಿಳಿಸಿದರು.

ಸಭೆಯಲ್ಲಿ ವೇದಿಕೆ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ ಕುರಿತು ಚರ್ಚಿಸಲಾಯಿತು. ಶಿವಾನಂದ ಚಕ್ರಸಾಲಿ, ಮುರಿಯಪ್ಪ ಕೆರಿಯುರು, ಸುರೇಶ ಕುಂಬಾರ ಜಕ್ಕಪ್ಪ ಕುಂಬಾರ, ಈಶ್ವರಪ್ಪ ಕುಂಬಾರ, ಯಲಪ್ಪ ಕುಂಬಾರ, ವಿ.ಆರ್. ಕುಂಬಾರ, ಎಚ್.ಕುಂಬಾರ, ಸಮಾಜದ ಹಿರಿಯರು, ಗಣ್ಯರು, ಪ್ರಮುಖರು, ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### 14ನೇ ಒಣ ಮೆಣಸಿನಕಾಯಿ ಮೇಳಕ್ಕೆ ಚಾಲನೆ ನೀಡಿದ ಶಾಸಕ ಎನ್.ಎಚ್. ಕೋನರಡ್ಡಿ

# ರೈತರು ವಾಣಿಜ್ಯ ಬೆಳೆ ಬೆಳೆಯಲು ಮುಂದಾಗಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ರೈತರು ಹೊಸ ತಳಿಯ ಬೆಳೆಗಳನ್ನು ಬೆಳೆಯಬೇಕು. ರೈತರು ಹೊಸ ಬೆಳೆಗಳನ್ನು ಬೆಳೆಯುವಂತೆ ಪ್ರೋತ್ಸಾಹ ನೀಡಬೇಕು. ವಾಣಿಜ್ಯ ಬೆಳೆ ಬೆಳೆಯಲು ರೈತರು ಮುಂದಾಗಬೇಕಿದೆ ಎಂದು ಶಾಸಕರಾದ ಎನ್.ಎಚ್. ಕೋನರಡ್ಡಿ ಹೇಳಿದರು.

ಇಲ್ಲಿನ ಮೂರುಸಾವಿರ ಮಠದ ಹೈಸ್ಕೂಲ್ ಮೈದಾನದಲ್ಲಿ ಕರ್ನಾಟಕ ರಾಜ್ಯ ಸಂಬಾರು ಪದಾರ್ಥಗಳ ಅಭಿವೃದ್ಧಿ ಮಂಡಳಿ, ತೋಟಗಾರಿಕೆ ಇಲಾಖೆ, ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆ, ಅಮರಶಿವ ರೈತ ಉತ್ಪಾದಕ ಸಂಸ್ಥೆ, ಸಂಶಿ (ಕುಂದಗೋಳ) ಹಾಗೂ ಉಳವಾಯೋಗಿ ರೈತ ಉತ್ಪಾದಕ ಸಂಸ್ಥೆ ಇವುಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 14ನೇ ಒಣ ಮೆಣಸಿನಕಾಯಿ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಬ್ಯಾಡಗಿ ಮೆಣಸಿನಕಾಯಿ ತಳಿಯನ್ನು ನವಲಗುಂದ, ನರಗುಂದ, ಗದಗ, ಕುಂದಗೋಳ, ಬಾಗಲಕೋಟ ಸೇರಿದಂತೆ ವಿವಿಧೆಡೆ ಬೆಳೆಯಲಾಗುತ್ತದೆ. ಬಾಗಲಕೋಟೆಯ ತೋಟಗಾರಿಕೆ ವಿಶ್ವವಿದ್ಯಾಲಯ ಹೊಸ ತಳಿಯ ಬೆಳೆಗಳನ್ನು ಸಂಶೋಧಿಸಿದ್ದಾರೆ. ಹೊಸ ತಳಿಗಳು ರೈತರಿಗೆ ತಲುಪಬೇಕು. ಇಂದು ಕೆಂಪು ಖಾರವನ್ನು ಹೆಚ್ಚಾಗಿ ಬಳಸಲಾಗುತ್ತಿದೆ. ಕೆಂಪು ಖಾರದ ಬಳಕೆಯಿಂದ ರೋಗಗಳು ಬರುವುದಿಲ್ಲ. ಬೆಂಗಳೂರು, ಮುಂಬೈನಂತಹ ನಗರಗಳಲ್ಲಿ ಸಹ ಕೆಂಪು ಖಾರವನ್ನು ಹೆಚ್ಚಾಗಿ ಬಳಕೆ ಮಾಡುತ್ತಿದ್ದಾರೆ. ವಿಜಯಪುರದಲ್ಲಿ ಚಟ್ನಿ ಅಂಗಡಿಗಳು ಸಹ ಅಧಿಕವಾಗಿವೆ. ಕೇಂದ್ರ ಮತ್ತು ಸರ್ಕಾರಗಳು ರೈತರಿಗೆ ಸಹಾಯಧನ, ಬೆಂಬಲ ಬೆಲೆಯನ್ನು ನೀಡಬೇಕು. ದೇಶದ ಬೆಳೆಗಳು ವಿದೇಶಗಳಿಗೆ ರಫ್ತಾಗುವಂತಾಗಬೇಕು ಎಂದು ಅವರು ತಿಳಿಸಿದರು.

ಮೆಣಸಿನಕಾಯಿ ಬೆಳೆ ಬೆಳೆಯಲು ಸಾಕಷ್ಟು ಹಣ ಖರ್ಚಾಗುತ್ತದೆ. ಒಣಮೆಣಸಿನಕಾಯಿ ಬೆಳೆಯುವ ಪ್ರದೇಶ ಕುಂಠಿತವಾಗುತ್ತಿದೆ. ಹೀಗಾಗಿ ಮೆಣಸಿನಕಾಯಿ ಬೆಳೆಯುವ ರೈತರಿಗೆ ಪ್ರೋತ್ಸಾಹ ನೀಡುವುದು ಅಗತ್ಯವಿದೆ. ಹವಾಮಾನಕ್ಕೆ ಅನುಗುಣವಾಗಿ ಬೆಳೆಗಳನ್ನು ಬೆಳೆಯುವಂತೆ ರೈತರನ್ನು ಪ್ರೋತ್ಸಾಹಿಸಬೇಕು ಎಂದು ಶಾಸಕರಾದ ಎನ್.ಎಚ್. ಕೋನರಡ್ಡಿ ತಿಳಿಸಿದರು.

ಶಾಸಕರಾದ ಎಂ.ಆರ್. ಪಾಟೀಲ ಮಾತನಾಡಿ, ಮೆಣಸಿನಕಾಯಿ ಬೆಳೆಗೆ ಉತ್ತಮ ಮಾರುಕಟ್ಟೆ ಕಲ್ಪಿಸಬೇಕಿದೆ. ಒಣ ಮೆಣಸಿನಕಾಯಿ ಬೆಳೆಯುವಂತೆ ರೈತರಿಗೆ ಪ್ರೋತ್ಸಾಹ ನೀಡಬೇಕು. ಬ್ಯಾಡಗಿ ಮೆಣಸಿನಕಾಯಿ ಕುರಿತು ಹೆಚ್ಚಿನ ಪ್ರಚಾರ ಮಾಡಬೇಕಿದೆ. ಬೆಳೆಗಳಿಗೆ ಉತ್ತಮ ವಾತಾವರಣದ ಅಗತ್ಯವಿರುತ್ತದೆ.

ಹೊಸ ತಳಿಗಳ ಬಗ್ಗೆ ರೈತರಿಗೆ ತಿಳಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸಂಬಾರು ಪದಾರ್ಥಗಳ ಅಭಿವೃದ್ಧಿ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರಾದ ಬಿ.ಆರ್. ಗಿರೀಶ, ಪ್ರಧಾನ ವ್ಯವಸ್ಥಾಪಕರಾದ ಡಾ. ರಾಮಚಂದ್ರ ಮಡಿವಾಳ, ತೋಟಗಾರಿಕೆ ಇಲಾಖೆಯ ತೋಟಗಾರಿಕೆ ಜಂಟಿ ನಿರ್ದೇಶಕರಾದ ಕಾಶಿನಾಥ ಭದ್ರಣ್ಣವರ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ಅಜಿತಕುಮಾರ ಮಶಾಲ್ದಿ, ತೋಟಗಾರಿಕೆ ಇಲಾಖೆಯ ಯೋಗೇಶ ಕಿಲಾರಿ, ಉಮೇಶ ಹೆಬಸೂರ, ಮಾಲತೇಶ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಆಳ್ವಾಸ್ ನುಡಿಸಿರಿ ವಿರಾಸತ್ ಸಾಂಸ್ಕೃತಿಕ ವೈಭವ, 500 ವಿದ್ಯಾರ್ಥಿ ಕಲಾವಿದರಿಂದ ನೃತ್ಯ

# 'ಉಸಿರು ಫೌಂಡೇಶನ್' ದಶಮಾನೋತ್ಸವ ಸಮಾರಂಭ




ರಾಷ್ಟ್ರಮಟ್ಟದಲ್ಲಿ ಖ್ಯಾತಿ ಪಡೆದ ಆಳ್ವಾಸ್ ನುಡಿಸಿರಿ ಮಾದರಿಯಲ್ಲಿ ಕಾರ್ಯಕ್ರಮ ನಡೆಸಲು ತೀರ್ಮಾನಿಸಲಾಗಿದೆ. ಫೆ. 23ರಂದು ಸಾಯಂಕಾಲ 5 ಗಂಟೆಗೆ ನಗರದ ವಿಡಿಎಸ್‌ಟಿಸಿ ಮೈದಾನದಲ್ಲಿ ಸಮಾರಂಭ ನೆರವೇರಲಿದ್ದು, ವಿಶೇಷವಾಗಿ ಯುವಜನತೆಯನ್ನು ಪ್ರತಿನಿಧಿಸುವಂಥ ಅನೇಕ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ವಿಶೇಷವಾಗಿ 500 ಜನ ವಿದ್ಯಾರ್ಥಿ ಕಲಾವಿದರು ನೃತ್ಯ ಪ್ರದರ್ಶನ ನೀಡಲಿದ್ದಾರೆ. ಕಾರಣ ಗದಗ ಜಿಲ್ಲೆಯ ಜನರು ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಶರಣ್ ಪಾಟೀಲ ಕೋರಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜಸೇವೆಗಾಗಿ ಸ್ಥಾಪಿತವಾದ ಉಸಿರು ಸೋಶಿಯಲ್ ವೆಲ್‌ಫೇರ್ ಫೌಂಡೇಶನ್‌ಗೆ 10 ವರ್ಷಗಳು ತುಂಬಿದ ಹಿನ್ನೆಲೆಯಲ್ಲಿ ನಗರದ ವಿ.ಡಿ.ಎಸ್.ಟಿ ಮೈದಾನದಲ್ಲಿ ಫೆ. 23ರಂದು ಅದ್ದೂರಿ ಸಮಾರಂಭ ನೆರವೇರಲಿದೆ ಎಂದು ಉಸಿರು ಫೌಂಡೇಶನ್ ಅಧ್ಯಕ್ಷ ಹಾಗೂ ಬಿಜೆಪಿ ಮುಖಂಡ ಶರಣ್ ಪಾಟೀಲ ನುಡಿದರು.

ನಗರದ ಪತ್ರಿಕಾ ಭವನದಲ್ಲಿ ಜರುಗಿದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, 2016ರಲ್ಲಿ ಸಮಾಜಕ್ಕೆ ಏನಾದರೊಂದು ಸಂದೇಶ ನೀಡಬೇಕು ಎಂಬ ಉದ್ದೇಶದಿಂದ ಬೆಂಗಳೂರಿನಲ್ಲಿ ಸ್ಥಾಪಿತವಾದ ಉಸಿರು ಫೌಂಡೇಶನ್ ಅನೇಕ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಾ ಇತ್ತೀಚಿನ ವರ್ಷಗಳಲ್ಲಿ ಗದಗ ಜಿಲ್ಲೆಯನ್ನು ಕೇಂದ್ರವಾಗಿಟ್ಟುಕೊಂಡು ಅನೇಕ ಸೃಜನಶೀಲ ಹಾಗೂ ಅರ್ಥಪೂರ್ಣ ಕಾರ್ಯಗಳನ್ನು ಮಾಡುತ್ತಿದೆ.

ಸದ್ಯ ಇಂಥ ಅಪರೂಪದ ಸಂಸ್ಥೆಗೆ ಒಂದು ದಶಕ ತುಂಬುತ್ತಿರುವ ಹಿನ್ನೆಲೆಯಲ್ಲಿ ಗದಗ ನಗರದಲ್ಲಿ ವಿಜೃಂಭಣೆಯಿಂದ ಸಮಾರಂಭ ನೆರವೇರಿಸಲು ನಿರ್ಧರಿಸಲಾಗಿದ್ದು, ಈ ಕಾರ್ಯಕ್ರಮಕ್ಕೆ ಮೂಡುಬಿದಿರೆಯ ಆಳ್ವಾಸ್ ಶಿಕ್ಷಣ ಸಂಸ್ಥೆಯ ಡಾ. ಎಂ.ಮೋಹನ ಆಳ್ವಾ ಅವರು ಸಹಯೋಗ ನೀಡಲು ಒಪ್ಪಿಕೊಂಡಿದ್ದು, ಅವರು ಸಹ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿ ಜನರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಎಂದು ತಿಳಿಸಿದರು.

ಉಸಿರು ಫೌಂಡೇಶನ್ ಸದಸ್ಯರಾದ ಮಲ್ಲಿಕಾರ್ಜುನ ಕಿರೇಸೂರ ಮಾತನಾಡಿ, ಶರಣ್ ಪಾಟೀಲ್ ನೇತೃತ್ವದ ಉಸಿರು ಫೌಂಡೇಶನ್ ಜನಸೇವೆಗೆ ಮೀಸಲಾದ ಸಂಸ್ಥೆಯಾಗಿದ್ದು, ನೂರಾರು ಜನರಿಗೆ ಬಹುರಾಷ್ಟ್ರೀಯ ಕಂಪನಿಗಳಲ್ಲಿ ಉದ್ಯೋಗ ದೊರಕುವಂತೆ ಮಾಡಿದ ಉದ್ಯೋಗ ಮೇಳ, ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಸಾಲ ಸೌಲಭ್ಯ, ಗ್ರಾಮೀಣ ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ, ವಿದ್ಯಾರ್ಥಿಗಳಿಗೆ ಲ್ಯಾಪಟಾಪ್ ವಿತರಣೆ, ಸಾರ್ವಜನಿಕ ಗಣೇಶೋತ್ಸವಕ್ಕೆ ದೇಣಿಗೆ, ಗದಗ ಜಿಲ್ಲೆಯ ವಿವಿಧ ಹಳ್ಳಿಗಳಲ್ಲಿ ಪ್ರಗತಿಪರ ರೈತರಿಗೆ ಸನ್ಮಾನ, ಗ್ರಾಮವಾಸ್ತವ್ಯ, ಬಡ ಕಾರ್ಮಿಕರಿಗೆ ನೆರವು, ಮಳೆಯಿಂದ ಹಾನಿಗೊಂಡ ಬಡ ಕುಟುಂಬಗಳಿಗೆ ತಾಡಪಾಲ್ ವಿತರಣೆ, ಧಾರ್ಮಿಕ ಕಾರ್ಯಕ್ರಮಗಳ ಭಕ್ತಿಸೇವೆ, ಬಡ ಅಸಹಾಯಕ ಕುಟುಂಬಗಳ ಸದಸ್ಯರು ತೀರಿಕೊಂಡಾಗ ಅಂತ್ಯಕ್ರಿಯೆಗೆ ನೆರವು, ಸಾವಿರಾರು ಮಹಿಳೆಯರು ಸೇರಿ ದಾಖಲೆ ಪ್ರಮಾಣದಲ್ಲಿ ಆಯೋಜನೆಗೊಂಡಿದ್ದ ಲಲಿತೋತ್ಸವ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ, ಗದಗ ಜನತೆಯ ಆರೋಗ್ಯ ಉನ್ನತಿಗಾಗಿ ಫೂಟ್ ಪಲ್ಸ್ ಉಚಿತ ಚಿಕಿತ್ಸೆ ಶಿಬಿರ, ಸಂಸ್ಕೃತ ಭಾಷಾ ಶಿಬಿರ, ವಿವಿಧ ಸಂಘ-ಸಂಸ್ಥೆಗಳಿಗೆ ಉದಾರ ದೇಣಿಗೆ, ಉಚಿತ ಕರಾಟೆ ಹಾಗೂ ಯೋಗ ಶಿಬಿರ, ನಿರ್ಗತಿಕರಿಗೆ ಮನೆ ನಿರ್ಮಾಣ, ಮನೆ ನವೀಕರಣಕ್ಕೆ ಸಹಾಯ, ಆಟೋ ಡ್ರೈವರ್‌ಗಳಿಗೆ ಉಚಿತ ಲೈಸನ್ಸ್, ಬಡ ಭಕ್ತಾದಿಗಳಿಗೆ ಉಚಿತ ಧರ್ಮಸ್ಥಳ ದರ್ಶನ ಹೀಗೆ ಅನೇಕ ಸಮಾಜಮುಖಿ ಚಟುವಟಿಕೆಗಳನ್ನು ಹಮ್ಮಿಕೊಂಡಿದೆ. ಇಂಥ ಸಂಸ್ಥೆಯ ದಶಮಾನೋತ್ಸವನ್ನು ಎಲ್ಲರೂ ಯಶಸ್ವಿಗೊಳಿಸಲು ಮನವಿ ಮಾಡಿದರು.

ಆಳ್ವಾಸ್ ನುಡಿಸಿರಿ ವಿರಾಸತ್ ಗದಗ ಘಟಕದ ಸಂಯೋಜಕರಾದ ಕನ್ನಡ ಉಪನ್ಯಾಸಕ ಮಹೇಶ್ ಹೆಚ್. ಹೊಂಬಳ ಕಾರ್ಯಕ್ರಮದ ಔಚಿತ್ಯದ ಕುರಿತು ಮಾತನಾಡಿದರು.

ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷ ಈರಣ್ಣ ಕರಿಬಿಷ್ಠಿ, ನಿವೃತ್ತ ಪ್ರಾಚಾರ್ಯ ಉಮೇಶ ಹಿರೇಮಠ, ಮಹೇಶ ಕರಿಬಿಷ್ಠಿ, ಬಸವರಾಜ ಗಡ್ಡೆಪ್ಪನವರ, ಈರಣ್ಣ ಬಾಳಿಕಾಯಿ, ಚೇತನಕುಮಾರ್, ಭೂಸನೂರಮಠ, ಎಸ್.ಜಿ. ಇಟಗಿ, ದೇಸಾಯಿಗೌಡ್ರ ಮುಂತಾದವರು ಉಪಸ್ಥಿತರಿದ್ದರು.

## ಶರಣ ಮಾದಾರ ಚೆನ್ನಯ್ಯ, ಶರಣ ಸಮಗಾರ ಹರಳಯ್ಯ, ಶರಣ ಡೋಹರ ಕಕ್ಕಯ್ಯನವರ ಜಯಂತಿ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರುಗಳ ಸಹಯೋಗದಲ್ಲಿ ಕಾಯಕ ಶರಣರಾದ ಶರಣ ಮಾದಾರ ಚೆನ್ನಯ್ಯ, ಶರಣ ಸಮಗಾರ ಹರಳಯ್ಯ, ಶರಣ ಡೋಹರ ಕಕ್ಕಯ್ಯನವರ ಜಯಂತಿ ಕಾರ್ಯಕ್ರಮವನ್ನು ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಫೆಬ್ರವರಿ 10ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ ಎಸ್.ತಂಗಡಗಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸುವರು.

ವಿಶೇಷ ಆಹ್ವಾನಿತರಾಗಿ ಯೋಜನೆ ಕಾರ್ಯಕ್ರಮಗಳು, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ ಆಗಮಿಸಲಿದ್ದಾರೆ. ಶರಣತತ್ವ ಚಿಂತಕ ಅಶೋಕ ಬರಗುಂಡಿ ಉಪನ್ಯಾಸ ನೀಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಆಗಮಿಸುವರು.

ಜಿಲ್ಲಾಧಿಕಾರಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿ ಡಾ. ದುರಗೇಶ್ ಕೆ.ಆರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ರೋಟರಿ ಸಂಸ್ಥೆ ಗದಗ-ಬೆಟಗೇರಿಗೆ 'ರೋಟರಿ ಜಿಲ್ಲಾ ಪ್ರಶಸ್ತಿ'

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಗದಗ-ಬೆಟಗೇರಿ ರೋಟರಿ ಸಂಸ್ಥೆಯು ಕೈಗೊಂಡ ಸಮಾಜಿಕ ಹಾಗೂ ಶೈಕ್ಷಣಿಕ ಕಾರ್ಯಕ್ರಮಗಳನ್ನು ಗುರುತಿಸಿ ರೋಟರಿ ಜಿಲ್ಲೆ 3170 ಅನೇಕ ಪ್ರಶಸ್ತಿ ಹಾಗೂ ಮನ್ನಣೆ ನೀಡಿದೆ.

ಕೊಲ್ಹಾಪೂರದಲ್ಲಿ ನಡೆದ 67ನೇ ಜಿಲ್ಲಾ ಸಮ್ಮೇಳನದಲ್ಲಿ ಜಿಲ್ಲಾ ಮಾಜಿ ಗವರ್ನರ್ ರೊ. ಶರದ ಪೈಯವರು ಸಂಸ್ಥೆಗೆ ಉತ್ತಮ ಸದಸ್ಯರ ಸಂಯೋಜಕ ಸಂಸ್ಥೆ ಹಾಗೂ ಉತ್ತಮ ಸಮಾಜಿಕ ಸೇವೆ ಸಂಸ್ಥೆಯಂದು ಪ್ರಶಸ್ತಿ ನೀಡಿ ಗೌರವಿಸಿದರು. ಇದೇ




ಸಂದರ್ಭದಲ್ಲಿ ಮಾಜಿ ಅಸಿಸ್ಟಂಟ್ ಗವರ್ನರ್ ರೊ. ಶಿವಾಚಾರ್ಯ ಎಸ್.ಹೊಸಳ್ಳಿಮಠರಿಗೆ ರೋಟರಿ ಕ್ಲಬ್ ಗದಗ ಬೆಟಗೇರಿ, ರೋಟರಿ ಕ್ಲಬ್ ಗಜೇಂದ್ರಗಡ ಹಾಗೂ ಗದಗ ರೋಟರಿ ಸೆಂಟ್ರಲ್ ಸಂಸ್ಥೆಗಳಿಗೆ ಉತ್ತಮ ಮಾರ್ಗದರ್ಶನ ಹಾಗೂ ಸಲಹೆ ನೀಡಿದನ್ನು ಪರಿಗಣಿಸಿ ಉತ್ತಮ ಅಸಿಸ್ಟಂಟ್ ಗವರ್ನರ್ ಪ್ರಶಸ್ತಿಯನ್ನು ನೀಡಿ ಗೌರವಿಸಿದರು.

ಮಾಜಿ ಅಧ್ಯಕ್ಷರಾದ ರೊ. ಡಾ. ಆರ್.ಬಿ. ಉಪ್ಪಿನ, ಕಾರ್ಯದರ್ಶಿಗಳಾದ ರೊ. ಸಂತೋಷ ಅಕ್ಕಿ, ರೊ. ಶಿವಾಚಾರ್ಯ ಹೊಸಳ್ಳಿಮಠ, ಅಧ್ಯಕ್ಷರಾದ ರೊ. ಡಾ. ಆರ್. ಕೆ. ಗಚ್ಚಿನಮಠ, ರೊ. ಬಾಲಕೃಷ್ಣ ಕಾಮತ್, ರೊ. ಶ್ರೀಧರ ಸುಲ್ತಾನಪೂರ ಸಮ್ಮೇಳನದಲ್ಲಿ ಭಾಗವಹಿಸಿದ್ದರು. 2024-25 ನೇ ಸಾಲಿನ ಅಧ್ಯಕ್ಷರಾದ ರೊ. ಡಾ. ಆರ್.ಬಿ. ಉಪ್ಪಿನ ಎಲ್ಲ ಸದಸ್ಯರನ್ನು ಅಭಿನಂದಿಸಿದರು.

## ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಗೊಳಿಸೋಣ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ತಾಲೂಕಿನ 2ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಇತಿಹಾಸ ಪ್ರಸಿದ್ಧ ಕೋಟೆ ಗ್ರಾಮ ಯಳವತ್ತಿಯಲ್ಲಿ ಫೆಬ್ರವರಿ 14ರಂದು ಹಮ್ಮಿಕೊಳ್ಳಲಾಗಿದೆ. ಗ್ರಾಮಸ್ಥರು ಸಡಗರ ಸಂಭ್ರಮದಿಂದ ಸಿದ್ಧತೆ ಮಾಡುತ್ತಿದ್ದು, ತಾಲೂಕಿನ ಎಲ್ಲರೂ ಪಾಲ್ಗೊಂಡು ಈ ಕನ್ನಡ ಜಾತ್ರೆಯನ್ನು ಮನೆ ಮನೆಯ ಹಬ್ಬದಂತೆ ಸಂಭ್ರಮಿಸಿ ಯಶಸ್ವಿಗೊಳಿಸೋಣ ಎಂದು ಶಿರಹಟ್ಟಿ ಮತಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಕರೆ ನೀಡಿದರು.

ಅವರು ಶನಿವಾರ ಸಮ್ಮೇಳನದ ಪೂರ್ವಭಾವಿಯಾಗಿ ತಹಸೀಲ್ದಾರ ಕಾರ್ಯಾಲಯದಲ್ಲಿ ಹಮ್ಮಿಕೊಂಡ ತಾಲೂಕಾ ಹಂತದ ಅಧಿಕಾರಿಗಳ ಸಭೆಯಲ್ಲಿ ಸಮ್ಮೇಳನದ ಲಾಂಛನ ಅನಾವರಣಗೊಳಿಸಿ ಮಾತನಾಡುತ್ತಿದ್ದರು.

ಕನ್ನಡ ಸಾಹಿತ್ಯ ಪರಿಷತ್ತಿನ ಲಕ್ಷ್ಮೇಶ್ವರ ತಾಲೂಕಾ ಘಟಕ ಅತ್ಯಂತ ಕ್ರಿಯಾಶೀಲತೆಯಿಂದ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸುವ ಕಾರ್ಯ ಮಾಡುವ ಮೂಲಕ ರಾಜ್ಯದಲ್ಲಿ ಹೆಸರಾಗಿದೆ. ಯಳವತ್ತಿಯಲ್ಲಿ ನಡೆಯುತ್ತಿರುವ ಸಮ್ಮೇಳನದಲ್ಲಿ ನಾವೆಲ್ಲರೂ ಕೂಡ ತನು-ಮನ-ಧನ ಸಹಾಯ-ಸಹಕಾರ ನೀಡಿ ಕನ್ನಡದ ತೇರನ್ನು ಎಳೆಯೋಣ ಎಂದರು.


ಯಳವತ್ತಿ ಗ್ರಾಮಸ್ಥರು ಸಮ್ಮೇಳನದ ಪೂರ್ವ ಸಿದ್ಧತೆ-ಯ ಕುರಿತು ಸಭೆಗೆ ಮಾಹಿತಿ ನೀಡಿದರು. ಯಳವತ್ತಿ ಗ್ರಾಮದ ಹಿರಿಯರು ಎಲ್ಲರ ಸಹಕಾರ ಕೋರಿದರು. ಸಭೆಯಲ್ಲಿ ತಹಸೀಲ್ದಾರ ಧನಂಜಯ ಎಮ್, ತಾ.ಪಂ ಕಾರ್ಯನಿರ್ವಹಣಾಧಿಕಾರಿ ಕೃಷ್ಣಪ್ಪ ಧರ್ಮರ, ವಿವಿಧ ಇಲಾಖೆಗಳ ತಾಲೂಕಾ ಹಂತದ ಅಧಿಕಾರಿಗಳು, ಕಸಾಪ ತಾಲೂಕು ಘಟಕದ ಅಧ್ಯಕ್ಷರು, ಪದಾಧಿಕಾರಿಗಳು, ಸಲಹಾ ಸಮಿತಿಯ ಸದಸ್ಯರು ಹಾಗೂ ಯಳವತ್ತಿ ಗ್ರಾಮಸ್ಥರು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಶರಣ ಸಂಗಮದಲ್ಲಿ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಫೆ. 8ರಂದು ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1684ನೇ ಶರಣ ಸಂಗಮದಲ್ಲಿ ಶರಣ ಪೂಜ್ಯ ಬಾಲಲೀಲಾ ಮಹಾಂತ ಶಿವಯೋಗಿಗಳ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಶರಣ ಎಸ್. ಎನ್. ಹಕಾರಿ ವಹಿಸುವರು. ಶರಣ ಕೆ.ಎನ್. ಸಂಶಿ ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು,



ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.



ಕರ್ನಾಟಕ ರಕ್ಷಣಾ ವೇದಿಕೆ(ಪ್ರವೀಣ ಶೆಟ್ಟಿ ಬಣ)ಯ ಲಕ್ಷ್ಮೇಶ್ವರ ತಾಲೂಕಾ ಘಟಕದ ಅಧ್ಯಕ್ಷರಾಗಿ ಶಿವು ಮಾರ್ತಾಡಪ್ಪ ಕರಡಿ ನೇಮಕವಾಗಿದ್ದಾರೆ. ರಾಜ್ಯಾಧ್ಯಕ್ಷ ಪ್ರವೀಣಕುಮಾರ ಶೆಟ್ಟಿ ಆದೇಶದ ಮೇರೆಗೆ ಜಿಲ್ಲಾಧ್ಯಕ್ಷ ವೆಂಕಟೇಶ ಬೇಲೂರ ನೇಮಕಾದೇಶ ಮಾಡಿದ್ದಾರೆ.

## ರಾಜ್ಯ ವಕೀಲರ ಪರಿಷತ್ ಚುನಾವಣೆ: ಹಿರಿಯ ನ್ಯಾಯವಾದಿ ಎಚ್. ವೆಂಕಟೇಶ ದೊಡ್ಡೇರಿ ನಾಮಪತ್ರ ಸಲ್ಲಿಕೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನ ಸದಸ್ಯ ಸ್ಥಾನಕ್ಕೆ ಮಾರ್ಚ್ 11, 2026ರಂದು ನಡೆಯಲಿರುವ ಚುನಾವಣೆಗೆ ಸಂಬಂಧಿಸಿದಂತೆ ಹೈಕೋರ್ಟ್ ಹಿರಿಯ ನ್ಯಾಯವಾದಿ ಎಚ್. ವೆಂಕಟೇಶ ದೊಡ್ಡೇರಿ ಅವರು ತಮ್ಮ ನಾಮಪತ್ರವನ್ನು ಸಲ್ಲಿಸಿದರು. ಈ ವೇಳೆ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ್ದ ಹಿರಿಯ, ಯುವ ಹಾಗೂ ಮಹಿಳಾ ವಕೀಲರು ಉಪಸ್ಥಿತರಿದ್ದು, ಅವರಿಗೆ ಅಭೂತಪೂರ್ವ ಬೆಂಬಲ ವ್ಯಕ್ತಪಡಿಸಿದರು.

ನಾಮಪತ್ರ ಸಲ್ಲಿಕೆಯ ನಂತರ ಮಾತನಾಡಿದ ವೆಂಕಟೇಶ ದೊಡ್ಡೇರಿ ಅವರು, ಸದೃಢ ಹಾಗೂ ಪಾರದರ್ಶಕ ರಾಜ್ಯ ವಕೀಲರ ಪರಿಷತ್ ನಿರ್ಮಾಣ ತಮ್ಮ ಪ್ರಮುಖ ಗುರಿಯಾಗಿದೆ ಎಂದು ಹೇಳಿದರು. ವಕೀಲರ ವೃತ್ತಿ, ಆರೋಗ್ಯ, ಕಲ್ಯಾಣ ನಿಧಿ, ವಿಮೆ, ವಕೀಲರ ರಕ್ಷಣೆ ಸೇರಿದಂತೆ ರಾಜ್ಯದ ವಕೀಲರ ಸರ್ವತೋಮುಖ ಅಭಿವೃದ್ಧಿಗೆ ಹಲವು ಮಹತ್ವಾಕಾಂಕ್ಷಿ ಯೋಜನೆಗಳನ್ನು ಜಾರಿಗೆ ತರುವ ಸಂಕಲ್ಪ ಹೊಂದಿದ್ದೇನೆ ಎಂದರು.

ಯುವ ವಕೀಲರ ಪ್ರೋತ್ಸಾಹ ಮತ್ತು ಅವರ ವೃತ್ತಿಪರ ಬೆಳವಣಿಗೆಗೆ ವಿಶೇಷ ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದ ಅವರು, ಸಹೃದಯಿ ಹಿರಿಯ, ಯುವ ಹಾಗೂ ವಿಶೇಷವಾಗಿ ಮಹಿಳಾ ವಕೀಲರು ನನಗೆ ತಮ್ಮ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಸೇವೆ ಸಲ್ಲಿಸಲು ಅವಕಾಶ ಮಾಡಿಕೊಡಬೇಕೆಂದು ಸವಿನಯವಾಗಿ ಮನವಿ ಮಾಡಿದರು. ಬೆಂಗಳೂರು ವಕೀಲ ಟಿ.ಎಂ. ಮಂಜುನಾಥ ಮಾತನಾಡಿ, ಅನ್ಯಾಯಕ್ಕೊಳಗಾದವರಿಗೆ ನ್ಯಾಯ ಒದಗಿಸುವುದು, ಸಾಮಾಜಿಕ ಬದಲಾವಣೆ ತರುವುದು ಹಾಗೂ ಸಂವಿಧಾನಿಕ ಮೌಲ್ಯಗಳನ್ನು ಕಾಪಾಡುವ ಮನೋಬಲ ಹೊಂದಿರುವ ಅಭ್ಯರ್ಥಿ ವೆಂಕಟೇಶ ದೊಡ್ಡೇರಿ ಎಂದರು. ವಕೀಲರ ವೃತ್ತಿಪರ ಹಕ್ಕುಗಳ ರಕ್ಷಣೆ, ನ್ಯಾಯಾಲಯಗಳ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಸಾರ್ವಜನಿಕ ಹಿತಾಸಕ್ತಿಯ ದೃಷ್ಟಿಯಿಂದ ಎಲ್ಲ ವಕೀಲರು ಅವರನ್ನು ಬೆಂಬಲಿಸಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಬೆಂಗಳೂರು ವಕೀಲರ ಸಹಕಾರ ಸಂಘದ ಅಧ್ಯಕ್ಷ ಪುಟ್ಟರಾಜು, ವಕೀಲರಾದ ವೆಂಕಟಮುನಿಶೆಟ್ಟಿ, ಹೊಸಕೋಟೆ ವಕೀಲರ ಸಂಘದ ಅಧ್ಯಕ್ಷ ರಮೇಶ್, ಟಿ.ಎಂ. ಮಂಜುನಾಥ, ವಿಕ್ರಮ, ಮಂಜುನಾಥ, ಗದಗದ ಮೈಲಾರಪ್ಪ ಡಿ.ಎಚ್., ಬಾಗಲಕೋಟೆಯ ಸುರೇಶ್ ನಾಗರಾಳ, ಕೋಲಾರದ ಅರುಣಾ ಎಂ.ಎನ್., ಕೊಪ್ಪಳದ ಹೊನ್ನೂರಸ್ವಾಮಿ, ಸುರೇಶ್, ಕೊಳ್ಳೇಗಾಲದ ಮಂಜುನಾಥ, ಚಿತ್ರದುರ್ಗದ ರಾಜು, ತಿಪ್ಪೇಸ್ವಾಮಿ, ಧನಂಜಯ, ಅರುಣ್, ಮರಿಸ್ವಾಮಿ, ಮಹೇಂದ್ರ ಸೇರಿದಂತೆ ಅನೇಕ ಹಿರಿಯ, ಯುವ ಹಾಗೂ ಮಹಿಳಾ ವಕೀಲರು ಹಾಜರಿದ್ದರು.

# ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಫೆಬ್ರವರಿ 19ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಶನಿವಾರ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಹಾಸ್ಟೇಲ್, ಶಾಲಾ-ಕಾಲೇಜು, ಗ್ರಾಮ ಪಂಚಾಯಿತಿಯಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕು. ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳಿಗೆ ಸನ್ಮಾನಿಸುವ ಕಾರ್ಯಕ್ರಮವಿದೆ. ಸಾದನೆಗೈದ ಸಮಾಜದ ಹಿರಿಯರನ್ನೂ ಸನ್ಮಾನಿಸಲಾಗುವದು.



ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಛತ್ರಪತಿ ಶಿವಾಜಿ ಮಹಾರಾಜರ ಕುರಿತು ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ ಎಂದರು. ಸಭೆಯಲ್ಲಿ ವೇದಿಕೆ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ ಕುರಿತು ಚರ್ಚಿಸಲಾಯಿತು. ಸಭೆಯಲ್ಲಿ ಹನಮಂತಪ್ಪ ಹೆಬ್ಬಳ್ಳಿ, ಬಸವರಾಜ ಹುಬ್ಬಳ್ಳಿ, ಸುರೇಶ ಬೇಂದ್ರೆ, ಮಂಜುನಾಥ ಮಾನೆ, ಶಿವಾಜಿ ಗ್ವಾರಿ, ಪಿ.ವೈ. ಜಾದವ್, ಎಸ್.ಪಿ. ಪವಾರ, ವೀರಣ್ಣ ಪವಾರ, ಹಿರಿಯರು, ಗಣ್ಯರು, ಪ್ರಮುಖರು ಸೇರಿದಂತೆ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಬಲ್ಡೋಟ ವಿರೋಧಿ ಹೋರಾಟಕ್ಕೆ ಶತದಿನ ಪೂರ್ಣ

# ಬೃಹತ್ ಶಕ್ತಿ ಪ್ರದರ್ಶನ ಮಾಡಿ ಗೆಲ್ಲೋಣ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಚುನಾವಣೆ ಬಂದಾಗ ಇಡೀ ಕೊಪ್ಪಳ ಜನ ಚುನಾವಣೆ ಬಹಿಷ್ಕಾರದ ಘೋಷಣೆ ಮಾಡಬೇಕು, ಮತ ಹಾಕಲ್ಲ ಎಂದು ನಿರ್ಣಯಿಸಿ ಹೋರಾಡಬೇಕು ಎಂದು ಪೂಜ್ಯ ಶ್ರೀ ಸಾಣೇಹಳ್ಳಿ ಪಂಡಿತಾರಾಧ್ಯ ಶಿವಾಚಾರ್ಯ ಶ್ರೀಗಳು ಕರೆ ನೀಡಿದರು.

ಅವರು ನಗರಸಭೆ ಹತ್ತಿರದ ಹೋರಾಟದ ವೇದಿಕೆಯ ಹಿಂದುಗಡೆ ನಿರ್ಮಿಸಿದ ಬೃಹತ್ ವೇದಿಕೆಯಲ್ಲಿ ಕೊಪ್ಪಳ ಜಿಲ್ಲಾ ಬಚಾವೋ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಆಶ್ರಯದಲ್ಲಿ ನಡೆದ ಬಲ್ಡೋಟ ಕಾರ್ಖಾನೆಗಳ ವಿರೋಧಿ ಧರಣಿ ಸತ್ಯಾಗ್ರಹದ 100ನೇ ದಿನದಲ್ಲಿ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಹಳ್ಳಿಗಳಿಗೆ ಭೇಟಿ ನೀಡಿದಾಗ ನಮಗೆ ಅಲ್ಲಿನ ನರಕ ಪರಿಚಯ ಆಯಿತು. ಮಹಾತ್ಮ ಗಾಂಧಿ ಅವರ ಸರ್ವೋದಯ ಪರಿಕಲ್ಪನೆಯಲ್ಲಿ ಪರಿಸರ, ಕೃಷಿ, ಆರೋಗ್ಯ, ಶಿಕ್ಷಣ ಮತ್ತು ಆಡಳಿತ ಸುಧಾರಣೆ ಆದರೆ




ತುಂಗಭದ್ರಾ ವಿಷಗೊಳಿಸುವ ಕಾರ್ಖಾನೆಗಳನ್ನು ಮುಚ್ಚಿಸಬೇಕು, ಅಲ್ಲಿಯವರೆಗೆ ಶುದ್ಧ ಸಂಸ್ಕರಿಸಿದ ನೀರನ್ನು ಜನ-ಜಾನುವಾರುಗಳಿಗೆ ಸರಬುರಾಜು ಮಾಡಲು ಕ್ರಮ ತೆಗೆದುಕೊಳ್ಳಬೇಕು. ಬಸಾಪುರ ಸಾರ್ವಜನಿಕ ಕೆರೆಯನ್ನು ಕೂಡಲೇ ಮರಳಿ ಜನರಿಗೆ ಬಿಟ್ಟು ಕೊಡಬೇಕು. ಭದ್ರಶ್ರೀ ಕಾರ್ಖಾನೆ ವಿಸ್ತರಣೆಗೆ ವಿರೋಧಿಸಿ ಹೋರಾಟ ತೀವ್ರಗೊಳಿಸುವದು ಸೇರಿ ಇತರೆ ನಿರ್ಣಯಗಳನ್ನು ತೆಗೆದುಕೊಳ್ಳಲಾಗಿದೆ.

ಮಾತ್ರ ಸರ್ವಾಂಗೀಣ ಅಭಿವೃದ್ಧಿ ಎನ್ನಬಹುದು. ದುರಾದೃಷ್ಟವಶಾತ್ ಇಲ್ಲಿ ಇವುಗಳ ಸ್ಥಿತಿ ಏನಾಗಿದೆ ಎಂದು ಪ್ರಶ್ನಿಸಿದರು.

ಈ ಹೋರಾಟ ಯಶಸ್ವಿಯಾಗಬೇಕು ಅಂದರೆ ಜನ ಸಂಘಟನೆ ಆಗಬೇಕಿದೆ. ಆಗ ಮಾತ್ರ ಅದು ಸಾಧ್ಯ. ಗೆಲ್ಲಬೇಕು ಎಂದರೆ ನಡೆ-ನುಡಿ ಶುದ್ಧವಾಗಿರಬೇಕು. ಕಾರ್ಖಾನೆ ವಿಸ್ತರಣೆ ಮಾಡಬಾರದು, ಎಚ್ಚರಿಕೆ ಕೊಡಬೇಕು ಅಲ್ಲದೇ ನಿಗಾ ವಹಿಸಬೇಕು. ಫೆ. 24ರ ಹೋರಾಟಕ್ಕೆ ಎಲ್ಲಾ ಜನಪ್ರತಿನಿಧಿಗಳು ಬರಲಿ, ನಾವೂ ಬರುತ್ತೇವೆ. ಮುಖ್ಯಮಂತ್ರಿ ಅವರನ್ನು ಭೇಟಿ ಮಾಡೋಣ, ಹೋರಾಟ ನಿಲ್ಲಿಸಬೇಕಾದರೆ ಕಾರ್ಖಾನೆ ನಿಲ್ಲಿಸಬೇಕು ಎಂದರು.

ಕಾರ್ಖಾನೆಗಳ ವಿಸ್ತರಣೆ ಮತ್ತು ಹೊಸ ಕಾರ್ಖಾನೆಗಳ ಸ್ಥಾಪನೆ ವಿರೋಧಿಸಿ ನಡೆದ ಸುದೀರ್ಘ ಹೋರಾಟದ ಭಾಗವಾಗಿ 2025ರ ಫೆ. 24ರಂದು ಗವಿಸಿದ್ದೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ಬಂದ್ ಮಾಡಿ ಹೋರಾಟ ಮಾಡಲಾದ ನೆನಪು ಹಾಗೂ ಹೋರಾಟ ತೀವ್ರಗೊಳಿಸುವ ನಿಟ್ಟಿನಲ್ಲಿ ಮತ್ತೊಮ್ಮೆ ಬೃಹತ್ ಹೋರಾಟ ಹಾಗೂ ಬಂದ್ ಕರೆ ಕೊಡಲಾಗಿದೆ. ಗವಿಮಠದಿಂದ ತಾಲೂಕ ಕ್ರೀಡಾಂಗಣದ ವರೆಗೆ ಪ್ರತಿಭಟನಾ ಮೆರವಣಿಗೆ ನಡೆಯಲಿದ್ದು, ಸುಮಾರು 10 ಸಾವಿರಕ್ಕೂ ಅಧಿಕ ಜನರು, ವಿದ್ಯಾರ್ಥಿಗಳು, ಮಹಿಳೆಯರು ಸೇರಿಸುವ ಗುರಿ ಇಡಲಾಗಿದೆ.

ಮುಖ್ಯ ಅತಿಥಿಗಳಾಗಿ ಧಾರವಾಡ ಸಾಹಿತಿ, ಚಿಂತಕ ರಂಜಾನ್ ದರ್ಗಾ, ನಗರಸಭೆ ಮಾಜಿ ಅಧ್ಯಕ್ಷ ಚಂದ್ರಶೇಖರ ಕವಲೂರು, ರಂಗಕರ್ಮಿ, ಕವಿ, ಸಾಹಿತಿ ಸೂರ್ಯಕಾಂತ ಗುಣಕಿಮಠ, ಧಾರವಾಡ ಸಾಹಿತಿ ಅಸ್ಲಂ ದರ್ಗಾ, ಮಹಿಳಾ ಧುರೀಣೆ ಜ್ಯೋತಿ ಎಂ.ಗೊಂಡಬಾಳ, ಸುಜಾತಾ ಗುರುರಾಜ ಹಲಗೇರಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎ.ವಿ. ಕಣವಿ ಆರೋಗ್ಯದ ಕುರಿತು ಮಾತನಾಡಿದರು. ಇದೇ ಸಮಯದಲ್ಲಿ ರೆಡ್ ಕ್ರಾಸ್ ಸಂಸ್ಥೆ ಸಹಯೋಗದಲ್ಲಿ ರಕ್ತದಾನ ಶಿಬಿರವನ್ನು ಡಾ. ಮಂಜುನಾಥ ಸಜ್ಜನ್ ನೇತೃತ್ವದಲ್ಲಿ ನಡೆಸಿದರು.

ಹೋರಾಟದಲ್ಲಿ ಡಿ.ಎಸ್. ಕೌಜಲಗಿ, ಎಚ್.ಎಸ್. ಪಾಟೀಲ್, ಎ.ಎಂ. ಮದರಿ, ಡಿ.ಎಂ. ಬಡಿಗೇರ, ಬಿ.ಜಿ. ಕರಿಗಾರ, ದಾನಪ್ಪ ಕವಲೂರು ಭಾಗ್ಯನಗರ, ಎಸ್.ಬಿ. ರಾಜೂರು, ಜಿ.ಬಿ. ಪಾಟೀಲ್, ಕಾವ್ಯಾ ಪ್ರಸನ್ನ ಗಡಾದ್, ಶಂಭುಲಿಂಗಪ್ಪ ಹಲಗೇರಿ, ಬಸವರಾಜ ಬಳ್ಳೊಳ್ಳಿ, ಪ್ರಭು ಹೆಬ್ಬಾಳ ವೇದಿಕೆಯಲ್ಲಿದ್ದರು.

ಮಂಜುನಾಥ ಜಿ.ಗೊಂಡಬಾಳ ಸ್ವಾಗತಿಸಿ, ಮಾತನಾಡಿದರು. ಪ್ರಾಸ್ತಾವಿಕವಾಗಿ ಶಿವಕುಮಾರ ಕುಕನೂರು, ಹೋರಾಟದ ಅನುಭವದ ನುಡಿಯನ್ನು ಡಿ.ಎಚ್. ಪೂಜಾರ ನುಡಿದರು.

### ಪಂಚ ಗ್ಯಾರಂಟಿ ಯೋಜನೆಗಳ ಗದಗ ಜಿಲ್ಲಾ ಮಟ್ಟದ ಸಮಾವೇಶದ ಪೂರ್ವಸಿದ್ಧತಾ ಸಭೆ

# ಸಮಾವೇಶದ ಯಶಸ್ಸಿಗೆ ಇಲಾಖೆಗಳ ಸಹಕಾರ ಅಗತ್ಯ



ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತನಾಡಿ, ಸಮಾವೇಶ ಕಾರ್ಯಕ್ರಮವು ಯಾವುದೇ ಲೋಪದೋಷಗಳಿಲ್ಲದಂತೆ ವಿಜೃಂಭಣೆಯಿಂದ ಅರ್ಥಪೂರ್ಣವಾಗಿ ಜರುಗುವಂತೆ ನೋಡಿಕೊಳ್ಳಬೇಕು ಎಂದರು.

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಗದಗ ಜಿಲ್ಲಾ ಮಟ್ಟದ ಸಮಾವೇಶ ಕಾರ್ಯಕ್ರಮವನ್ನು ಫೆಬ್ರವರಿ 18ರಂದು ನಗರದ ವಿವೇಕಾನಂದ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದ್ದು, ಸಮಾವೇಶವನ್ನು ಅಚ್ಚುಕಟ್ಟಾಗಿ ಹಾಗೂ ವ್ಯವಸ್ಥಿತವಾಗಿ ನಿರ್ವಹಿಸಿ ಯಶಸ್ವಿಗೊಳಿಸಲು ವಿವಿಧ ಇಲಾಖೆಗಳ ಸಹಕಾರ ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಪಂಚ ಗ್ಯಾರಂಟಿ ಯೋಜನೆಗಳ ಗದಗ ಜಿಲ್ಲಾ ಮಟ್ಟದ ಸಮಾವೇಶ ಏರ್ಪಡಿಸುವ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾರ್ಯಕ್ರಮವು ಅರ್ಥಪೂರ್ಣವಾಗಿ ಜರುಗಲು ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಆಯಾ ಸಮಿತಿಯ ಅಧಿಕಾರಿಗಳು ತಮಗೆ ವಹಿಸಿದ ಕಾರ್ಯಗಳನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು. ಕಾರ್ಯಕ್ರಮದ ಸ್ಥಳವು ಸ್ವಚ್ಛವಾಗಿರುವಂತೆ ನೋಡಿಕೊಳ್ಳಬೇಕು. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಕಾರ್ಯಕ್ರಮದ ಸ್ಥಳದಲ್ಲಿ ಸೂಕ್ತ ಆಸನದ ವ್ಯವಸ್ಥೆ, ಕುಡಿಯುವ ನೀರಿನ ಸೌಲಭ್ಯ ಇರುವಂತೆ ನೋಡಿಕೊಳ್ಳಬೇಕು. ಪಂಚ ಗ್ಯಾರಂಟಿ ಯೋಜನೆಗಳ ಹಾಗೂ ವಿವಿಧ ಇಲಾಖೆಗಳ ಯೋಜನೆಗಳ ಕುರಿತು ಬಿಂಬಿಸುವ ಮಳಿಗೆಗಳನ್ನು (ಸ್ಟಾಲ್‌ಗಳನ್ನು) ನಿರ್ಮಿಸಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನಿರ್ದೇಶನ ನೀಡಿದರು.

ಸಭೆಯಲ್ಲಿ ಬ್ಯಾನರ್‌ಗಳ ಅಳವಡಿಕೆ, ಕಲಾ ತಂಡಗಳ ಆಯ್ಕೆ, ಊಟ-ಉಪಹಾರದ ವ್ಯವಸ್ಥೆ, ಸೂಕ್ತ ಬಂದೋಬಸ್ತ್, ತುರ್ತು ವೈದ್ಯಕೀಯ ಸೇವೆ, ಫಲಾನುಭವಿಗಳ ಯಶೋಗಾಥೆ, ಸಾರಿಗೆ ವ್ಯವಸ್ಥೆ, ಎಲ್.ಇ.ಡಿ ಅಳವಡಿಕೆ, ವೇದಿಕೆ ವ್ಯವಸ್ಥೆ, ಸಾಂಸ್ಕೃತಿಕ ಕಾರ್ಯಕ್ರಮ ಕುರಿತಂತೆ ವಿವಿಧ ವಿಷಯಗಳ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಜಿ.ಪಂ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ, ಕಾರ್ಮಿಕ ಇಲಾಖೆ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಕೌಶಲ್ಯಾಭಿವೃದ್ಧಿ ಇಲಾಖೆ ಅಧಿಕಾರಿ ಮಲ್ಲೂರ ಬಸವರಾಜ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.



ಗದಗ ನಗರದ ಮುಳಗುಂದ ರಸ್ತೆಯ ಪತ್ರಿಕಾ ಭವನದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರ ಹಾಗೂ ಪದಾಧಿಕಾರಿಗಳ ನವೀಕೃತ ಕಚೇರಿಯನ್ನು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹಾಗೂ ನಿಕಟಪೂರ್ವ ಮುಖ್ಯಮಂತ್ರಿಗಳು ಹಾಗೂ ಗದಗ-ಹಾವೇರಿ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ ಉದ್ಘಾಟಿಸಿದರು. ಕಾ.ನಿ.ಪ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಕಾ.ನಿ.ಪ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ, ರಾಜ್ಯ ಕಾರ್ಯಕಾರಿಣಿ ಸದಸ್ಯ ಅರುಣಕುಮಾರ ಹಿರೇಮಠ, ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಸೇರಿದಂತೆ ಇತರರು ಇದ್ದರು.

# 'ವ್ಯಾಲಂಟೈನ್ ಡೇ' ಅನಾಚಾರಗಳನ್ನು ತಡೆಗಟ್ಟಲು ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಫೆಬ್ರವರಿ 14ರಂದು 'ವ್ಯಾಲಂಟೈನ್ ಡೇ' ಆಚರಿಸುವ ಪಾಶ್ಚಾತ್ಯರ ಕೆಟ್ಟ ರೂಢಿ ಭಾರತದಲ್ಲಿಯೂ ವ್ಯಾಪಕವಾಗಿ ಹರಡಿದೆ. ಪಾಶ್ಚಾತ್ಯರು ತಮ್ಮ ವ್ಯಾವಹಾರಿಕ ಲಾಭಕ್ಕಾಗಿ ಪ್ರೇಮದ ಹೆಸರಿನಲ್ಲಿ ಈ ವಿಕೃತ ಕಲ್ಪನೆಯನ್ನು ಪ್ರಚಾರ ಮಾಡುತ್ತಿದ್ದಾರೆ. ಇದರ ಪರಿಣಾಮವಾಗಿ ಯುವ ಪೀಳಿಗೆ ಅನೈತಿಕತೆಯತ್ತ ಸಾಗುತ್ತಿದೆ. 'ವ್ಯಾಲಂಟೈನ್ ಡೇ' ಹಿನ್ನೆಲೆಯಲ್ಲಿ ಯುವತಿಯರ ಮೇಲಿನ ಕಿರುಕುಳ ಹಾಗೂ ಹಲವಾರು ಹಿಂಸಾತ್ಮಕ ಘಟನೆಗಳು ಹೆಚ್ಚಾಗುತ್ತಿದ್ದು, ಇದರ ಬಗ್ಗೆ ಗಂಭೀರವಾಗಿ ಚಿಂತನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಹಿಂದೂ ಜನಜಾಗೃತಿ ಸಮಿತಿಯ ವತಿಯಿಂದ ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ವ್ಯಾಲೆಂಟೈನ್ ಡೇ ವೇಳೆ ಪಾರ್ಟಿಗಳಲ್ಲಿ ಯುವಕ-ಯುವತಿಯರು ಮದ್ಯಪಾನ, ಧೂಮಪಾನ, ಮಾದಕ ವಸ್ತುಗಳ ಸೇವನೆ ಮುಂತಾದ ಅನಾಚಾರಗಳಲ್ಲಿ ತೊಡಗುವುದು ಬೆಳಕಿಗೆ ಬಂದಿದೆ. ಯುವತಿಯರನ್ನು ಪ್ರಭಾವಿತರನ್ನಾಗಿಸಲು ಹೆಚ್ಚಿನ ವೇಗದಲ್ಲಿ ವಾಹನ ಚಲಾಯಿಸುವುದರಿಂದ ಅಪಘಾತಗಳ ಸಂಖ್ಯೆಯೂ ಹೆಚ್ಚುತ್ತಿದೆ. ಅಲ್ಲದೆ, ಸುಳ್ಳು ಹೆಸರು ಹೇಳಿ ಯುವತಿಯರಿಗೆ ಮೋಸ ಮಾಡುವವರು 'ಲವ್ ಜಿಹಾದ್' ಮೂಲಕ ಅವರ ಬದುಕನ್ನು ಹಾಳು ಮಾಡುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ ಈ ಘಟನೆಗಳನ್ನು ಗಂಭೀರವಾಗಿ ಪರಿಗಣಿಸಿ ಫೆಬ್ರವರಿ 14ರಂದು ನಗರದಲ್ಲಿ ವಿಶೇಷ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಬೇಕು. ಕಾಲೇಜು ಆವರಣಗಳಲ್ಲಿ ಕಾನೂನು ವಿರೋಧಿ ಕೃತ್ಯಗಳಲ್ಲಿ ತೊಡಗುವವರ ಮೇಲೆ ನಿಗಾ ಇಡಬೇಕು, ಅತಿವೇಗದಲ್ಲಿ ವಾಹನ ಚಲಾಯಿಸುವವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಆಪತ್ತಿನ ಸಂದರ್ಭಗಳಲ್ಲಿ ಯುವತಿಯರಿಗೆ ಸಹಾಯ ಮಾಡಲು ವಿಶೇಷ ಹೆಲ್ಪ್‌ಲೈನ್ ನಂಬರ್‌ನ್ನು ಸಾರ್ವಜನಿಕವಾಗಿ ಪ್ರಕಟಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ ರಾಣಿ ಚಂದಾವರಿ, ಮಹೇಶ್ ಜಾದವ, ಭೀಮಸಿ ಗೋಕಾವಿ, ಹಿಂದೂ ಜನಜಾಗೃತಿ ಸಮಿತಿಯ ಡಾ. ರವಿ ನಂದಿ, ಲಕ್ಷ್ಮೀ ಇತರರು ಉಪಸ್ಥಿತರಿದ್ದರು.

# ಅಂತಾರಾಷ್ಟ್ರೀಯ ವಾಣಿಜ್ಯ ಮೇಳ-2026

■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ತ್ರಿಪುರವಾಸಿನಿ, ಅರಮನೆ ಮೈದಾನದಲ್ಲಿ ನಡೆಯುತ್ತಿರುವ ಅಂತಾರಾಷ್ಟ್ರೀಯ ವಾಣಿಜ್ಯ ಮೇಳ-2026ರಲ್ಲಿ ಶುಕ್ರವಾರ ನಡೆದ ಕೃಷಿ ಪಂಡಿತ ಪ್ರಶಸ್ತಿ ಹಾಗೂ ಕೃಷಿ ಪ್ರಶಸ್ತಿ ವಿಜೇತರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸನ್ಮಾನಿಸಿದರು. ಗದಗ ಜಿಲ್ಲೆಯ ಮಂಗಳಾ ನೀಲಗುಂದ ಇವರು ಕೃಷಿ ಪಂಡಿತ ಪ್ರಶಸ್ತಿಯನ್ನು ಸ್ವೀಕರಿಸಿದರು.

ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನದಡಿ ಬೀಜಾಮೃತ, ಜೀವಾಮೃತ, ನೀಮಾಸ್ತ್ರ, ದಶಪರ್ಣಿ, ಬ್ರಹ್ಮಾಸ್ತ್ರ ಇತ್ಯಾದಿ ನೈಸರ್ಗಿಕ ಉತ್ಪನ್ನಗಳ ಗದಗ ಜಿಲ್ಲೆಯ ಮಳಿಗೆಯಲ್ಲಿ, ನೈಸರ್ಗಿಕ ಉತ್ಪನ್ನಗಳ ಉಪಯೋಗ ಮಾಡುವ ಹಾಗೂ ಬಳಸುವ ವಿಧಾನಗಳನ್ನು ನೈಸರ್ಗಿಕ ಕೃಷಿಕರು ಹಾಗೂ ಜೈವಿಕ ಪರಿಕರ ಸಂಪನ್ಮೂಲ ಕೇಂದ್ರ(BRC) ಬಸವರಾಜ ನಾವಿ ರೈತರಿಗೆ ವಿವರಿಸಿದರು. ಸಾವಿರಾರು ರೈತರು ಮಳಿಗೆಗೆ ಭೇಟಿ ಕೊಟ್ಟು ಮಾಹಿತಿ ಪಡೆದರು.

ಮರೆತು ಹೋದ ಖಾದ್ಯಗಳ ಸ್ಪರ್ಧೆಯ ವಿಜೇತರಾದ ಶಿಲ್ಪಾ ಅಂಗಡಿ ಹುಲಕೋಟಿ ಇವರು ಗುಳ್ಳಡಿಕಿ ಲಾಡುಗಳನ್ನು ಪ್ರದರ್ಶನಕ್ಕೆ ಇರಿಸಿದ್ದರು. ಈಗಿನ ಜನಾಂಗವು ಪಿಜ್ಜಾ, ಬರ್ಗರ್, ಕುರ್ಕುರೆಯಂತಹ ಅನಾರೋಗ್ಯಕರ ಆಹಾರಗಳನ್ನು ತ್ಯಜಿಸಿ ನಮ್ಮ ಪೂರ್ವಜರ ಕಾಲದಿಂದ ಬಂದ, ಈಗ ಮರೆತುಹೋದ ಖಾದ್ಯಗಳನ್ನು ಮನೆಯಲ್ಲಿಯೇ ಮಾಡಿ ತಿನ್ನುವುದರ ಲಾಭಗಳನ್ನು ಅವರು ವಿವರಿಸಿದರು. ಮಳಿಗೆಗೆ ಭೇಟಿ ನೀಡಿ ಸಾವಿರಾರು ಜನರು ಖಾದ್ಯದ ಮಾಹಿತಿಯನ್ನು ಪಡೆದರು.

ಈ ಮಳಿಗೆಗಳಿಗೆ ಕೃಷಿ ಸಚಿವ ಚಲುವರಾಯಸ್ವಾಮಿ ಭೇಟಿ ನೀಡಿ ಗುಳ್ಳಡಿಕಿ ಲಾಡುವನ್ನು ಸವಿದು ಮೆಚ್ಚುಗೆ ವ್ಯಕ್ತಪಡಿಸಿದರು.



# ಕನಕ ಭವನ ನಿರ್ಮಾಣಕ್ಕೆ ಸಚಿವರಿಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕನಕ ಭವನ ನಿರ್ಮಾಣಕ್ಕಾಗಿ ಅನುದಾನ ಒದಗಿಸಬೇಕೆಂದು ಇಲ್ಲಿಯ ಬಜಾರ ರಸ್ತೆಯಲ್ಲಿರುವ ಗದಗ ತಾಲೂಕು ಉಣ್ಣೆ ಔದ್ಯೋಗಿಕ ಸಹಕಾರ ಸಂಘದ ವತಿಯಿಂದ ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲರಿಗೆ ಮನವಿ ಸಲ್ಲಿಸಿದರು.

ಪಂಚ ದೇವಾಲಯ ಮತ್ತು ಬಾವಿಗಳ ಅನಾವರಣ ಕಾರ್ಯಕ್ರಮದ ನಂತರ ಸಚಿವರು ಸಹಕಾರ ಸಂಘಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಸಚಿವರನ್ನು ಸನ್ಮಾನಿಸಿ ಮನವಿ ಪತ್ರ ಸಲ್ಲಿಸಿದ ಸಂಘದ ಪದಾಧಿಕಾರಿಗಳು, ಈ ಹಿಂದೆ ತಾವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾಗಿದ್ದಾಗ ಸಂಘ ಶ್ರೇಯೋಭೀವೃದ್ಧಿ ಮತ್ತು ಕನಕ ಭವನ ಕಟ್ಟಡಕ್ಕೆ ಅನುದಾನ ಬಿಡುಗಡೆ ಮಾಡಿದ್ದು, ಅದು ಅಪೂರ್ಣವಾಗಿದೆ. ಆದ್ದರಿಂದ ಇನ್ನಷ್ಟು ಅನುದಾನ ಬಿಡುಗಡೆ ಮಾಡಿ ಪೂರ್ಣಗೊಳಿಸಬೇಕೆಂದು ಮನವಿ ಮಾಡಿದರು.

ಸಂಘದ ಅಧ್ಯಕ್ಷ ಎಂ.ಎನ್. ಉಮಚಗಿ, ಉಪಾಧ್ಯಕ್ಷ ಕೊಟ್ರಪ್ಪ ಬೆನ್ನಳ್ಳಿ, ಎನ್.ಐ. ಕಿರೀಟಗೇರಿ ಹಾಗೂ ಪದಾಧಿಕಾರಿಗಳು ಹಾಜರಿದ್ದರು.

# ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರ ಆಗಮನ ಫೆ. 10ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಮನ್ಮಧ್ವಾಚಾರ್ಯಮೂಲ ಮಹಾಸಂಸ್ಥಾನ ಶ್ರೀಮದುತ್ತರಾದಿ ಮಠಾಧೀಶರಾದ ಶ್ರೀ ಶ್ರೀ 1008 ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರು ಫೆ. 10ರಂದು ಗದಗ ನಗರಕ್ಕೆ ಆಗಮಿಸಲಿದ್ದು, ಅಂದು ಪ್ರಾತಃಕಾಲ 7.30ಕ್ಕೆ ಶ್ರೀಗಳವರ ಪಾದಪೂಜೆ, ಮುದ್ರಾಧಾರಣೆ ಹಾಗೂ ಮಂತ್ರಾಕ್ಷತೆ ಕಾರ್ಯಕ್ರಮವನ್ನು ಶ್ರೀ ವೀರನಾರಾಯಣ ಕಲ್ಯಾಣ ಮಂಟಪದ ಪ್ರಾಂಗಣದಲ್ಲಿ ಏರ್ಪಡಿಸಲಾಗಿದೆ.

ಸರ್ವ ಆಸ್ತಿಕ ಸದ್ಭಕ್ತರು ಆಗಮಿಸಿ ಶ್ರೀಪಾದಂಗಳವರ ಪರಮಾನುಗ್ರಹಕ್ಕೆ ಪಾತ್ರರಾಗಬೇಕಾಗಿ ಶ್ರೀ ವಿಶ್ವಮಧ್ವ ಮಹಾಪರಿಷತ್ ಗದಗ ಶಾಖೆ ಪ್ರಕಟಣೆ ಕೋರಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka